ಸಂಪುಟ : 4 ಸಂಚಿಕೆ : 05 ಪುಟ : 4 ಬೆಲೆ : ರೂ. 4 ರವಿವಾರ, ಫೆಬ್ರುವರಿ, 12, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 05 Pages : 4 Rate : 4 Rs Sunday, February 12, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ಮುಖ್ಯಮಂತ್ರಿಗಳ ಟ್ವೀಟ್ ಗೆ ಪ್ರಧಾನಿ ಮೋದಿ ಪ್ರತಿಕ್ರಿಯೆ



ಬೆಂಗಳೂರು : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಇಂದು ಟ್ವಿಟ್ಟರ್ ನಲ್ಲಿ ಹಂಚಿಕೊಂಡಿರುವ ವಂದೇ ಭಾರತ್ ಎಕ್ಸ್ ಪ್ರೆಸ್ ಹಾಗೂ ಮೈಸೂರು-ಬೆಂಗಳೂರು ದಶಪಥ ರಸ್ತೆಯ ವೀಡಿಯೊಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಟ್ವೀಟ್ ಮೂಲಕ ಪ್ರತಿಕ್ರಿಯೆ ನೀಡಿದ್ದಾರೆ.

ಕರ್ನಾಟಕದಲ್ಲಿ ವಿಶ್ವದರ್ಜೆಯ ಮೂಲಸೌಕರ್ಯ ಹಾಗೂ ಬೆಳವಣಿಗೆಯ ಅದ್ಭುತ ದೃಶ್ಯ. ಡಬಲ್ ಇಂಜಿನ್ ಸರ್ಕಾರ ರಾಜ್ಯದಲ್ಲಿ ಚಮತ್ಕಾರ ಮಾಡಿದೆ' ಎಂದು ಸಿಎಂ ಬಸವರಾಜ್ ಬೊಮ್ಮಾಯಿ ಟ್ವೀಟ್ ಮಾಡಿದ್ದರು.

ಸಿಎಂ ಅವರ ಟ್ವೀಟ್ ಗೆ ಪ್ರಧಾನಿ ಮೋದಿಯವರು ಪ್ರತಿಕ್ರಿಯೆ ನೀಡುತ್ತಾ, 'ನಮ್ಮ ಜನ ಅತ್ಯುತ್ತಮ ಮೂಲಸೌಕರ್ಯಕ್ಕೆ ಅರ್ಹರಿದ್ದಾರೆ. ಮೂಲಸೌಕರ್ಯ ಅಭಿವೃದ್ಧಿಯಲ್ಲಿ ನಮ್ಮ ಕೆಲಸ ವ್ಯಾಪಕವಾಗಿ ಮೆಚ್ಚುಗೆಗೆ ಪಾತ್ರವಾಗಿದೆ ಎಂದಿದ್ದಾರೆ.

## ಪಂಚಮುಖಿ ಆಂಜನೇಯನ ದರ್ಶನ ಪಡೆದ ಚುನಾವಣಾ ಚಾಣಾಕ್ಯ



ಪುತ್ತೂರು: ಕೇಂದ್ರ ಗೃಹ ಸಚಿವ ಅಮಿತ್ ಶಾ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿಗೆ ಆಗಮಿಸಿದ್ದು, ಕರಾವಳಿ ಭಾಗದಲ್ಲಿ ಬಿಜೆಪಿ ಮತಬೇಟೆ ನಡೆಸಲಿದ್ದಾರೆ. ಇದಕ್ಕೂ ಮುನ್ನ ಪುತ್ತೂರಿನ ಹನುಮಗಿರಿ ಕ್ಷೇತ್ರಕ್ಕೆ ಅಮಿತ್ ಶಾ ಭೇಟಿ ನೀಡಿದರು.

ಹನುಮಗಿರಿ ಕ್ಷೇತ್ರದ ಪಂಚಮುಖಿ ಆಂಜನೇಯ ದೇವಾಲಯಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಪುತ್ತೂರಿನ ಈಶ್ವರಮಂಗಲದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಭಾರತ ಮಾತಾ ಮಂದಿರ ಉದ್ಘಾಟನೆ ಮಾಡಿದರು. 6 ಅಡಿ ಎತ್ತರದ ಅಮೃತ ಶಿಲೆಯಲ್ಲಿ ನಿರ್ಮಾಣಗೊಂಡಿರುವ ಭಾರತಮಾತಾ ವಿಗ್ರಹಕ್ಕೆ ಪುಷ್ಪಾರ್ಚನೆ ಮಾಡಿದರು.

ಈ ವೇಳೆ ಸಿಎಂ ಬಸವರಾಜ್ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಹಾಗೂ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಬೆಂಗಳೂರಿನಲ್ಲಿ ಶಂಕಿತ ಉಗ್ರನ ಬಂಧನ

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಶಂಕಿತ ಉಗ್ರನೊಬ್ಬನನ್ನು ಎನ್ ಐ ಎ ಅಧಿಕಾರಿಗಳು ಬಂಧಿಸಿದ್ದಾರೆ.

ಬಂಧಿತ ಶಂಕಿತ ಉಗ್ರನನ್ನು ಆರೀಫ್ ಎಂದು ಗುರುತಿಸಲಾಗಿದೆ. ಬೆಂಗಳೂರಿನ ಥಣಿಸಂದ್ರದ ಮಂಜುನಾಥ ನಗರದಲ್ಲಿ ಶಂಕಿತ ಉಗ್ರನನ್ನು ಬಂಧಿಸಲಾಗಿದೆ. ಐಎಸ್ ಡಿ ಮತ್ತು ಕೇಂದ್ರ ತನಿಖಾ ಸಂಸ್ಥೆಗಳಿಂದ ಕಾರ್ಯಾಚರಣೆ ನಡೆಸಿ ಉಗ್ರನನ್ನು ಬಂಧಿದೆ.

ಶಂಕಿತ ಭಯೋತ್ಪಾದಕ ಆರೀಫ್ ನನ್ನು ಬಂಧಿಸಿ ತೀವ್ರ ವಿಚಾರಣೆ ನಡೆಸಲಾಗಿದೆ. 2 ವರ್ಷಗಳಿಂದ ಅಲ್ ಖೈದಾ ಉಗ್ರ ಸಂಘಟನೆ ಜೊತೆ ಆರೀಫ್ ಸಂಪರ್ಕದಲ್ಲಿದ್ದ. ಟೆಲಿಗ್ರಾಮ್ ಗ್ರೂಪ್ ಗಳಲ್ಲಿ ಸಕ್ರಿಯನಾಗಿದ್ದ.

ಅಲ್ಲದೇ ಬೆಂಗಳೂರಿನಲ್ಲಿ ಸಾಫ್ಟ್ ವೇರ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಆರೀಫ್, ವರ್ಕ ಫ್ರಂ ಹೋಂ ಕಾರ್ಯನಿರ್ವಹಿಸುತ್ತಿದ್ದ. ಮುಂದಿನ ವರ್ಷ ಸಿರಿಯಾಗೆ ಹೋಗಲು ಪ್ಲಾನ್ ಮಾಡಿದ್ದ ಎನ್ನಲಾಗಿದೆ.




## ಪಿಎಸ್ಐ ನೇಮಕಾತಿ ಅಕ್ರಮ ಪ್ರಕರಣ: 53 ಅಭ್ಯರ್ಥಿಗಳು ಶಾಶ್ವತ ಡಿಬಾರ್ ಮಾಡಿ ಪೊಲೀಸ್ ಇಲಾಖೆ ಆದೇಶ

ಬೆಂಗಳೂರು: 545 ಪಿಎಸ್ ಐ ನೇಮಕಾತಿ ಹಗರಣದಲ್ಲಿ ಬಂಧಿತ 53 ಅಭ್ಯರ್ಥಿಗಳನ್ನು ಶಾಶ್ವತವಾಗಿ ಡಿಬಾರ್ ಮಾಡಿ ಪೊಲೀಸ್ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ.

ಪಿಎಸ್ ಐ ನೇಮಕಾತಿ ಹಗರಣದಲ್ಲಿ ಬಂಧಿತರಾಗಿರುವ 53 ಅಭ್ಯರ್ಥಿಗಳು ಮುಂದಿನ ಯಾವುದೇ ಪೊಲೀಸ್ ನೇಮಕಾತಿಗೂ ಅರ್ಜಿ ಹಾಕದಂತೆ ನಿರ್ಬಂಧಿಸಲಾಗಿದ್ದು, ಅಭ್ಯರ್ಥಿಗಳ ಆಧಾರ್ ಸಂಖ್ಯೆನ್ನು ನೇಮಕಾತಿ ವೆಬ್ ಸೈಟ್ ಗೆ ಅಪ್ ಲೋಡ್ ಮಾಡಿದ್ದಾರೆ. ಹೀಗಾಗಿ ಅರ್ಜಿ ಸಲ್ಲಿಸಲು ಅಥವಾ ಪರೀಕ್ಷೆ ಬರೆಯಲು ಇವರಿಗೆ ಅವಕಾಶ ಇರುವುದಿಲ್ಲ.

ಅಕ್ರಮ ನೇಮಕಾತಿಯಲ್ಲಿ ಭಾಗಿಯಾದವರ ವಿರುದ್ಧ ಈಗಾಗಲೇ ಕಾನೂನು ಕ್ರಮ ಜರುಗಿಸಲಾಗಿದ್ದು, ಇದೀಗ ಈ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಪ್ರಯತ್ನಿಸಿದರೆ ಸ್ವೀಕೃತವಾಗದಂತೆ ಕ್ರಮ ವಹಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

## ಮೇಕೆದಾಟು ಯೋಜನೆ ಮಾಡಿಯೇ ತೀರುತ್ತೇವೆ: ಡಿ.ಕೆ.ಶಿ



ಮದ್ದೂರು: ಈ ಮಂಡ್ಯ ಜಿಲ್ಲೆ ಹಾಗೂ ಕ್ಷೇತ್ರದ ಇತಿಹಾಸವನ್ನು ನಾವು ಸ್ಮರಿಸಬೇಕು. ಸ್ವಾತಂತ್ರ್ಯ ಹೋರಾಟದಲ್ಲಿ ಈ ಭೂಮಿ ಮಹತ್ವದ ಪಾತ್ರ ವಹಿಸಿತ್ತು ಎಂಬುದಕ್ಕೆ ಶಿವಪುರಸೌಧವೇ ಸಾಕ್ಷಿ. ಬ್ರಿಟೀಷರನ್ನು ಓಡಿಸಲು ಈ ಭಾಗದ ಹಿರಿಯರು ಮಾಡಿದ ಹೋರಾಟ, ತ್ಯಾಗ ಬಲಿದಾನಕ್ಕೆ ಈ ಸೌಧ ಸಂಕೇತವಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಮದ್ದೂರಿನಲ್ಲಿ ನಡೆದ ಕಾಂಗ್ರೆಸ್ ಪ್ರಜಾಧ್ವನಿ ಸಮಾವೇಶದಲ್ಲಿ ಮಾತನಾಡಿದ ಡಿ.ಕೆ.ಶಿವಕುಮಾರ್, ಹೀರಣ್ಣ ಗೌಡರು, ಶಂಕರೇಗೌಡರು, ಮಾದೇಗೌಡರು, ಮಂಚೆಗೌಡರು, ಅಂಬರೀಷ್ ಹಾದಿಯಾಗಿ ಅನೇಕ ನಾಯಕರು ಈ ಭೂಮಿಗೆ ಸೇವೆ ಸಲ್ಲಿಸಿದ್ದಾರೆ. ಈ ಭೂಮಿಯಲ್ಲಿ ಹುಟ್ಟಿ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದ ಎಸ್.ಎಂ. ಕೃಷ್ಣ ಅವರ ಸಾಧನೆ ಸ್ಮರಿಸಲು ಬಯಸುತ್ತೇನೆ.

ಮಂಡ್ಯಕ್ಕೆ ದೇಶ ಬದಲಾವಣೆ ಮಾಡುವ ಶಕ್ತಿ ಇದೆ. ಈ ಕ್ಷೇತ್ರದ ಜನ ಕೃಷಿ ಆಧರಿಸಿ ಬದುಕುತ್ತಿದ್ದಾರೆ. ರೈತನಿಗೆ ಲಂಚ, ಪಿಂಚಣಿ, ನಿವೃತ್ತಿ ಯಾವುದೂ ಇಲ್ಲ. ಈ ರೈತರು ಮಳೆ, ಭೂಮಿ, ಬೆಳೆ ಮೇಲೆ ಅವಲಂಬಿತವಾಗಿದ್ದಾರೆ. ಈ ರೈತರ ರಕ್ಷಣೆ ಮಾಡಬೇಕಿದೆ. ಈ ಸಂದರ್ಭದಲ್ಲಿ ಮೈಸೂರು ಮಹಾರಾಜರು ಹಾಗೂ ವಿಶ್ವೇಶ್ವರಯ್ಯ ಅವರು ನಮ್ಮ ಬದುಕಿಗೆ ದೊಡ್ಡ ಶಕ್ತಿ ನೀಡಿದ್ದು, ಅವರನ್ನು ಈಗಲೂ ಸ್ಮರಿಸುತ್ತೇವೆ. ಇಲ್ಲಿ ಸೇರಿರುವವರು ರೈತರು. ಇವರಿಗೆ ಕೃಷಿ ಬಿಟ್ಟರೆ ಬೇರೆ ಅವಕಾಶ ಇಲ್ಲ. ಇವರು ಸೂರ್ಯ, ಭೂಮಿ ಹಾಗೂ ನೀರನ್ನು ಅವಲಂಭಿಸಿದ್ದಾರೆ ಎಂದರು.

ರಾಜ್ಯದಲ್ಲಿರುವ ಬಿಜೆಪಿ ಸರ್ಕಾರ ಅವರದೇ ಆದ ಸಿದ್ಧಾಂತದ ಮೇಲೆ ಆಡಳಿತ ನಡೆಸುತ್ತಿದೆ. ಈ ಜಿಲ್ಲೆಯಲ್ಲಿ 7 ಜೆಡಿಎಸ್ ಶಾಸಕರನ್ನು ಕೊಟ್ಟಿದ್ದೀರಿ. ನಾವು 80 ಸೀಟು ಗೆದ್ದಿದ್ದರೂ ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಲು 38 ಸ್ಥಾನ ಗೆದ್ದಿದ್ದ ಕುಮಾರಸ್ವಾಮಿ ಅವರಿಗೆ ಬೇಷರತ್ ಬೆಂಬಲ ನೀಡಿದ್ದೆವು. ಲೋಕಸಭೆ ಚುನಾವಣೆಯಲ್ಲಿ ನಮ್ಮ ಪಕ್ಷದ ನಾಯಕರಲ್ಲಿ ಹಲವು ಭಿನ್ನಾಭಿಪ್ರಾಯ ಇದ್ದರೂ ಕೂಡ ನಾನು ಹಾಗೂ ಕಾಂಗ್ರೆಸ್ ಪಕ್ಷ ಅವರ ಬೆಂಬಲಕ್ಕೆ ನಿಂತಿದ್ದೆವು. ರಾಜಕೀಯದಲ್ಲಿ ಭಿನ್ನ ಅಭಿಪ್ರಾಯ ಇದ್ದರೂ ಒಂದು ಸಿದ್ಧಾಂತಕ್ಕಾಗಿ ನಾನು ಅವರ ಬೆಂಬಲಕ್ಕೆ ನಿಂತೆ. ಕುಮಾರಸ್ವಾಮಿ ಅವರೇ ಶಿವಕುಮಾರ್ ನಮ್ಮ ಜತೆ ನಿಂತಿದ್ದಾರೆ, ನಾವು ಜೋಡೆತ್ತುಗಳು ಎಂದು ಹೇಳಿದ್ದರು.

ರಾಜಕಾರಣ ನಿಂತ ನೀರಲ್ಲ. ಯಾವುದೇ ಬದಲಾವಣೆ ಸಾಧ್ಯ. ಈ ಕ್ಷೇತ್ರದ ಶಾಸಕರಿಗೆ ಶಕ್ತಿ ಕೊಟ್ಟಿದ್ದು ಮಾದೇಗೌಡರು, ಎಸ್.ಎಂ ಕೃಷ್ಣ. ಅವರು ಕ್ಷೇತ್ರ ಬಿಟ್ಟು ಕೊಡದಿದ್ದರೆ ಈ ಸ್ಥಾನಕ್ಕೆ ಏರುತ್ತಿರಲಿಲ್ಲ. ನಮಗೆ ಸಹಾಯ ಮಾಡಿದವರನ್ನು ಸ್ಮರಿಸಬೇಕು. ಅವರಿಗೆ ಮೂರ್ನಾಲ್ಕು ಬಾರಿ ಅವಕಾಶ ನೀಡಿದ್ದೀರಿ.

ನಮ್ಮ ಪಕ್ಷ ದೇವೇಗೌಡರನ್ನು ಪ್ರಧಾನಮಂತ್ರಿಯನ್ನಾಗಿ ಮಾಡಿತು. ನಂತರ ಕುಮಾರಸ್ವಾಮಿ ಅವರು ಬಿಜೆಪಿ ಜತೆ ಸೇರಿ ಸರ್ಕಾರ ಮಾಡಿದರು. ಆದರೆ ನಾವು ಅವರಿಗೆ ಸಹಾಯ ಮಾಡಿದ್ದೇವೆ. ನಾವೆಲ್ಲರೂ ಸೇರಿ ಅವರಿಗೆ ಅವಕಾಶ ನೀಡಿದ್ದೇವೆ. ಈಗ ಕಾಲ ಬದಲಾಗುತ್ತಿದೆ. ರೈತರ ಬದುಕನ್ನು ಬದಲಿಸುವ ಶಕ್ತಿ ಕಾಂಗ್ರೆಸ್ ಪಕ್ಷಕ್ಕೆ ಇದೆ. ನಾವು ಯಾರಿಗಾಗಿ ಮೇಕೆದಾಟು ಪಾದಯಾತ್ರೆ ಮಾಡಿದೆವು? ಪ್ರತಿ ವರ್ಷ 400 ಟಿಎಂಸಿ ನೀರು ಸಮುದ್ರ ಪಾಲಾಗುತ್ತಿದೆ. ಅದನ್ನು ತಡೆಹಿಡಿದು, ನಿಮಗೆ ನೀರಿನ ಕೊರತೆ ಬಾರದಂತೆ ನೋಡಿಕೊಳ್ಳುವುದು ನನ್ನ ಜವಾಬ್ದಾರಿ. ಹೀಗಾಗಿ ನಾವು ಮೇಕೆದಾಟು ಯೋಜನೆ ಮಾಡಿಯೇ ತೀರುತ್ತೇವೆ ಎಂದು ಹೇಳಿದರು.



## ಟರ್ಕಿಯಲ್ಲಿ ಬೃಹತ್ ತಿಮಿಂಗಿಲಗಳು ಸಾವು

ನಿಕೋಸಿಯಾ: ಟರ್ಕಿಯ ಭೂಕಂಪದ ಕೇಂದ್ರ ಬಿಂದುವಿಗೆ ಹತ್ತಿರದಲ್ಲಿರುವ ಉತ್ತರ ಸೈಪ್ರಸ್‌ನ ಕಡಲ ಕಿನಾರೆಗೆ ಕಳೆದ ಕೆಲವು ದಿನಗಳಿಂದ ಮೃತ ತಿಮಿಂಗಿಲಗಳು ತೇಲಿ ಬರುತ್ತಿವೆ. ಭೂಕಂಪದ ಪರಿಣಾಮವಾಗಿ ತಿಮಿಂಗಿಲಗಳು ಸಾವಿಗೀಡಾಗಿರಬಹುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಅಪರೂಪದ ಕ್ಯುವಿಯರ್-ಕೊಕ್ಕಿನ ತಿಮಿಂಗಿಲಗಳು ಪೋಲಿಸ್ ಕ್ರಿಸೋಚಸ್ ನಗರದ ಪೂರ್ವ ತೀರಕ್ಕೆ ಬಂದು ಬೀಳುತ್ತಿವೆ ಎಂದು ಸೈಪ್ರಸ್ ಮೀನುಗಾರಿಕೆ ಇಲಾಖೆಯ ಅಧಿಕಾರಿ ಯಿಯಾನೋಸ್ ಐಯೊನೌ ಹೇಳಿದ್ದಾರೆ. ಶುಕ್ರವಾರ ಸಾಯಂಕಾಲ ಪತ್ತೆಯಾದ ನಾಲ್ಕು ತಿಮಿಂಗಿಲಗಳಲ್ಲಿ ಎರಡು ಇನ್ನೂ ಜೀವಂತವಾಗಿದ್ದವು. ಅವುಗಳಿಗೆ ಹಾನಿಯೂ ಆಗಿರಲ್ಲಿಲ್ಲ. ಸ್ಥಳೀಯ ಯುವ ಕೇಂದ್ರದ ಸ್ವಯಂಸೇವಕರು ಅವುಗಳನ್ನು ಮತ್ತೆ ಸಮುದ್ರಕ್ಕೆ ತಳ್ಳಿದರು ಎಂದು ಐಯೊನೌ ಹೇಳಿದರು. ಟರ್ಕಿಯ ಸೇನೆಯಿಂದ ನಿಯಂತ್ರಿಸಲ್ಪಡುವ ಉತ್ತರದ ಕಡಲತೀರಗಳಲ್ಲಿ ಶುಕ್ರವಾರ ಮತ್ತೆ ಮೂರು ತಿಮಿಂಗಿಲಗಳು ಪತ್ತೆಯಾಗಿದ್ದವು ಎಂದು ಸುದ್ದಿ ಮಾಧ್ಯಮ 'ಕ್ಸಿನ್ಹುವಾ' ವರದಿ ಮಾಡಿದೆ. ಟರ್ಕಿ ಭೂಕಂಪದ ಕೇಂದ್ರಬಿಂದುವಿನ ಸಮೀಪವಿರುವ ಸೈಪ್ರಸ್ ಕರಾವಳಿಯಲ್ಲಿ ತಿಮಿಂಗಿಲಗಳು ಹೀಗೆ ಸಾಮೂಹಿಕವಾಗಿ ಬಂದು ಬೀಳುತ್ತಿರುವುದು ಕಾಕತಾಳೀಯವಾಗಿರಲು ಸಾಧ್ಯವಿಲ್ಲ. ಅವುಗಳ ಸಾವಿಗೆ ಭೂಕಂಪವೂ ಕಾರಣವಾಗಿರಬಹುದು' ಎಂದು ರಾಷ್ಟ್ರೀಯ ರೇಡಿಯೊ ಸಿಬಿಸಿಗೆ ಐಯೊನೌ ಹೇಳಿದ್ದಾರೆ.

## ಉಚಿತ ಶಿಕ್ಷಣ, ಪ್ರತಿ ಗ್ರಾಮ ಪಂಚಾಯಿತಿಗೆ ಹೈಟೆಕ್ ಆಸ್ಪತ್ರೆ; ಹೆಚ್.ಡಿ.ಕುಮಾರಸ್ವಾಮಿ ಘೋಷಣೆ

ಬೆಳಗಾವಿ: ಕುಂದಾನಗರಿ ಬೆಳಗಾವಿಯಲ್ಲಿ ಜೆಡಿ ಎಸ್ ಪಂಚರತ್ನ ರಥಯಾತ್ರೆ ಆರಂಭವಾಗಿದ್ದು, ರಾಯಬಾಗ ಹಾಗೂ ಕುಡಚಿ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಬೃಹತ್ ಶಕ್ತಿ ಪ್ರದರ್ಶನ ನಡೆಸಿದೆ.

ಕುಡಚಿ ವಿಧಾನಸಭಾ ಕ್ಷೇತ್ರದ ಕುರಬಗೋಡಿ ಸಮಾವೇಶದಲ್ಲಿ ಮಾತದಾಡಿದ ಹೆಚ್.ಡಿ.ಕುಮಾರಸ್ವಾಮಿ, ಕಳೆದ ನವೆಂಬರ್ 18 ರಂದು ಆರಂಭವಾದ ಜೆಡಿಎಸ್ ಪಂಚರತ್ನ ಯಾತ್ರೆ ಇಂದು ಬೆಳಗಾವಿ ಜಿಲ್ಲೆಗೆ ಬಂದು ತಲುಪಿದೆ ಎಂದರು.



ಪ್ರತಿನಿತ್ಯ ನನ್ನ ಬಳಿ ನೂರಾರು ಜನ ಬರ್ತಾರೆ. ಬೇರೆ ಬೇರೆ ಕಾಯಿಲೆಗಳಿಂದ ಬಳಲುತ್ತಿರುತ್ತಾರೆ, ಅವರಿಗೆ ಹಣಕಾಸಿನ ನೆರವು ಅಗತ್ಯ. ಬೇರೆ ಯಾರ ಮನೆಯೂ ಜನ ಹೋಗೊದಿಲ್ಲ. ನನ್ನ ಮನೆಗೆ ಬರ್ತಾರೆ. ಬಡ ಜನರಿಗೆ ಬಹಳ ಸುಲಭವಾಗಿ ಸಿಗುವ ವ್ಯಕ್ತಿ ನಾನು. ಒಂದು ಭಾರೀ ಜೆಡಿಎಸ್ ಗೆ ಬಹುಮತ ನೀಡಿ. ಈ ರಾಜ್ಯದ ಜನರ ಋಣ ತೀರಿಸುವ ಕೆಲಸ ಮಾಡುವೆ. ಜೆಡಿಎಸ್ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ ನನ್ನ ಬೆನ್ನೆಲುಬಾಗಿ ನಿಂತಿದ್ದಾರೆ ಎಂದು ಹೇಳಿದರು.

ಜೆಡಿಎಸ್ ಗೆ ಒಂದು ಭಾರೀ ಅವಕಾಶ ಕೊಟ್ಟು ಅಧಿಕಾರಕ್ಕೆ ತಂದರೆ 1 ರಿಂದ 12 ನೇ ತರಗತಿವರೆಗೆ ಉಚಿತ ಶಿಕ್ಷಣ, ಯಾವುದೇ ಪ್ರೈವೇಟ್ ಶಾಲೆಗಳಿಗೆ ಕಡಿಮೆಯಿಲ್ಲದಂತೆ ಶಾಲೆಗಳನ್ನ ತೆರೆಯುತ್ತೇವೆ ಎಂದು ಘೋಷಿಸಿದರು.

ಆರೋಗ್ಯ ಸಮಸ್ಯೆ ಎದುರಾದಾಗ ಸರ್ಕಾರವೇ ನೇರವಾಗಿ ಆಸ್ಪತ್ರೆ ಬಿಲ್ ಕಟ್ಟುವ ಕೆಲಸವನ್ನ ಸರ್ಕಾರ ಮಾಡಲಿದೆ. ಪ್ರತಿ ಗ್ರಾಮ ಪಂಚಾಯತಿಗೆ ಹೈಟೆಕ್ ಆಸ್ಪತ್ರೆ ನಿರ್ಮಾಣ. ಮೂವರು ತಜ್ಞ ವೈದ್ಯರು ಸೇರಿದಂತೆ 30 ಜನ ವೈದ್ಯಕೀಯ ಸಿಬ್ಬಂದಿ ನೇಮಿಸಿ, ಗ್ರಾಮೀಣ ಜನತೆಯ ಆರೋಗ್ಯಕ್ಕೆ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ಬೆಳಗಾವಿ ಜಿಲ್ಲೆ ಖಾನಾಪೂರ ಕ್ಷೇತ್ರದ ಹಲಸಿ ಗ್ರಾಮದಲ್ಲಿ ಇಂದು ಬೆಳಗ್ಗೆ ಕದಂಬರ ಕಾಲದ ಐತಿಹಾಸಿಕ ಶ್ರೀ ನಾರಾಯಣ ಮತ್ತು ಶ್ರೀ ನರಸಿಂಹ ದೇವರ ಆಲಯಕ್ಕೆ ತೆರಳಿ ಹೆಚ್.ಡಿ.ಕುಮಾರಸ್ವಾಮಿ ಅವರು ಪೂಜೆ ಸಲ್ಲಿಸಿದರು.

ನಿನ್ನೆ ರಾತ್ರಿ ಅವರು ಇದೇ ಗ್ರಾಮದಲ್ಲಿ ಪಂಚರತ್ನ ರಥಯಾತ್ರೆಯ ಗ್ರಾಮ ವಾಸ್ತವ್ಯ ಹೂಡಿದ್ದರು.

## ಮೂರು ವರ್ಷಗಳಲ್ಲಿ ದೇಶದಲ್ಲಿ 2 ಲಕ್ಷ ಹೊಸ ಪ್ರಾಥಮಿಕ ಕೃಷಿ ಕ್ರೆಡಿಟ್ ಸೊಸೈಟಿ ಸ್ಥಾಪನೆ: ಅಮಿತ್ ಶಾ




ಪುತ್ತೂರು: ಮೂರು ವರ್ಷಗಳಲ್ಲಿ ದೇಶದಲ್ಲಿ 2 ಲಕ್ಷ ಹೊಸ ಪ್ರಾಥಮಿಕ ಕೃಷಿ ಕ್ರೆಡಿಟ್ ಸೊಸೈಟಿ ಸ್ಥಾಪಿಸಲಾಗುವುದು ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ತಿಳಿಸಿದ್ದಾರೆ.

ವಿವೇಕಾನಂದ ಕಾಲೇಜು ಮೈದಾನದಲ್ಲಿ ಕ್ಯಾಂಪ್ಕೊ ಸುವರ್ಣ ಮಹೋತ್ಸವಕ್ಕೆ ಚಾಲನೆ ನೀಡಿ, ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ರೈತರ ಹಿತ ಕಾಯುತ್ತಿದೆ. ರೈತರು ಮತ್ತು ಗ್ರಾಮಗಳ ಅಭಿವೃದ್ಧಿಗೆ ಕೇಂದ್ರ ಬಜೆಟ್ ನಲ್ಲಿ ಹೆಚ್ಚಿನ ಒತ್ತು ನೀಡಲಾಗಿದೆ. ಪ್ರತಿ ಪಂಚಾಯಿತಿಯಲ್ಲಿ ಬಹು ಆಯಾಮದ ಪ್ರಾಥಮಿಕ ಕೃಷಿ ಕ್ರೆಡಿಟ್ ಸೊಸೈಟಿ ಸ್ಥಾಪನೆಗೆ ಪ್ರಧಾನಿ ಮೋದಿ ನಿರ್ಧರಿಸಿದ್ದಾರೆ. ಪ್ರತಿಯೊಂದು ಪಂಚಾಯಿತಿಯೂ ಒಂದು ಸೊಸೈಟಿ ಹೊಂದಲಿವೆ ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ದೇಶದಲ್ಲಿ ಪಿಎಫ್ ಐ ಸಂಘಟನೆ ಬ್ಯಾನ್ ಮಾಡುವ ಮೂಲಕ ಭದ್ರತೆ ಒದಗಿಸಲಾಗಿದೆ. ಕರ್ನಾಟಕದಲ್ಲಿ ಇದೀಗ ನೆಮ್ಮದಿ, ಶಾಂತಿ ಇದೆ. ಭಯೋತ್ಪಾದನೆ, ನಕ್ಸಲರನ್ನು ಯಶಸ್ವಿಯಾಗಿ ಮಟ್ಟ ಹಾಕಿರುವುದಾಗಿ ತಿಳಿಸಿದ ಅಮಿತ್ ಶಾ, ದೇಶ ವಿರೋಧಿ ಚಟುವಟಿಕೆಗಳಿಗೆ ಕಾಂಗ್ರೆಸ್ ಬೆಂಬಲ ನೀಡುತ್ತಿದೆ. ವೋಟ್ ಬ್ಯಾಂಕ್ ಗಾಗಿ ಟಿಪ್ಪು ಜಯಂತಿ ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.

## ಅದಾನಿ ಕಂಪನಿಯಲ್ಲಿ ವಿದೇಶಿ ಹೂಡಿಕೆ ಬಗ್ಗೆ ಸೆಬಿ ತನಿಖೆ

ಹೊಸದಿಲ್ಲಿ: ಸ್ಥಗಿತಗೊಂಡಿದ್ದ ಉದ್ಯಮಿ ಗೌತಮ್ ಅದಾನಿ ಒಡೆತನದ ಅದಾನಿ ಎಂಟರ್‌ಪ್ರೇಸರ್ಸ್‌ನ 20 ಸಾವಿರ ಕೋಟಿ ರೂ. ಮೌಲ್ಯದ ಶೇರು ಮಾರಾಟದ ವಹಿವಾಟಿನಲ್ಲಿ ಹೂಡಿಕೆಗಾಗಿ ಮುಂದೆ ಬಂದಿದ್ದ ಇಬ್ಬರು ಮಾರಿಷಸ್ ಹೂಡಿಕೆದಾರರಿಗೂ ಗೌತಮ್ ಅದಾನಿಯವರಿಗೂ ಇರುವ ನಂಟಿನ ರಹಸ್ಯ ಭೇದಿಸಲು ಮಾರುಕಟ್ಟೆನಿಯಂತ್ರಕ 'ಸೆಬಿ' ತನಿಖೆಗೆ ಮುಂದಾಗಿರುವ ಮಾಹಿತಿ ಲಭಿಸಿದೆ.

ಅದಾನಿ ಸಮೂಹದಲ್ಲಿ ಹೂಡಿಕೆ ಮಾಡಿದ್ದ ಮಾರಿಷಸ್ ಮೂಲದ ಕಂಪನಿಗಳಾದ ಗ್ರೇಟ್ ಇಂಟರ್‌ನ್ಯಾಷನಲ್ ಟಸ್ಕರ್ ಫಂಡ್ ಮತ್ತು ಆಯುಷ್‌ಮತ್ ಲಿಮಿಟೆಡ್‌ನ ಹೂಡಿಕೆಗಳ ಬಗ್ಗೆ ಸೆಬಿ ತನಿಖೆ ನಡೆಸುತ್ತಿದೆ ಎನ್ನಲಾಗಿದೆ.

ಅದಾನಿ ಸಮೂಹ ವ್ಯಾಪಾರದಲ್ಲಿ ಅಕ್ರಮ ಎಸಗಿರುವುದಾಗಿ ಮಾಜಿ ಪಾಲುದಾರ ಕಂಪನಿ ಹಿಂಡನ್‌ಬರ್ಗ್ ಆರೋಪಿಸಿದ ಬೆನ್ನಲ್ಲೇ ಈ ತನಿಖೆ ಆರಂಭಗೊಂಡಿದೆ. ಷೇರು ಮಾರಾಟ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿರುವುದರ ಹಾಗೂ ಭಾರತೀಯ ಭದ್ರತಾ ಕಾನೂನುಗಳ ಪಾಲನೆಯಲ್ಲಿನ ಲೋಪಗಳ ಸತ್ಯಾಸತ್ಯತೆ ಅ ಕುರಿತು ಸೆಬಿ ತನಿಖೆ ನಡೆಸುತ್ತಿದೆ. ಮಾರಿಷಸ್ ಕಂಪನಿಗಳು ಪ್ರಮುಖ ಹೂಡಿಕೆದಾರರಾಗಿದ್ದು, ಎಫ್‌ಪಿಓ ಹಿಂಪಡೆಯಲು ಈ ಕಂಪನಿಗಳ ಹೂಡಿಕೆ ಕಾರಣವಾಗಿರುವ ಸಂದೇಹಗಳು ವ್ಯಕ್ತವಾಗಿದ್ದು ಈ ಕಂಪನಿಗಳು ಹಾಗೂ ಅದಾನಿ ಸಮೂಹದ ಸಂಬಂಧವನ್ನು ಸೆಬಿ ಭೇದಿಸಲಿದೆ.

## ಜನವರಿ ಮಾಹೆಯಲ್ಲಿ ರೂ.6085 ಕೋಟಿ ದಾಖಲೆಯ ಜಿ.ಎಸ್.ಟಿ ಸಂಗ್ರಹ: ಸಿಎಂ ಮಾಹಿತಿ



ಬೆಂಗಳೂರು: ಜನವರಿ ಮಾಹೆಯಲ್ಲಿ ರೂ.6085 ಕೋಟಿ ಜಿ.ಎಸ್.ಟಿ ಸಂಗ್ರಹ ಮಾಡಿ ರಾಜ್ಯ ದಾಖಲೆ ಬರೆದಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಈ ಕುರಿತು ಟ್ವೀಟ್ ಮಾಡಿದ್ದು, ಜಿಎಸ್ ಟಿ ತೆರಿಗೆ ಸಂಗ್ರಹಣೆಯಲ್ಲಿ ಕರ್ನಾಟಕ ಶೇ. 30 ರಷ್ಟು ಅತ್ಯಧಿಕ ಬೆಳವಣಿಗೆ ಪ್ರಮಾಣವನ್ನು ಹೊಂದಿರುವ ರಾಜ್ಯವಾಗಿ ಮುಂದುವರೆದಿದೆ. ತೆರಿಗೆ ಸಂಗ್ರಹಣೆಯಲ್ಲಿ ಸುಧಾರಣೆ, ಹೆಚ್ಚಿನ ಕಣ್ಗಾವಲು, ಆರ್ಥಿಕತೆಯಲ್ಲಿ ಚೇತರಿಕೆ ಹಾಗೂ ತೆರೆಗೆದಾರರಲ್ಲಿ ಹೆಚ್ಚಿರುವ ಅನುಸರಣೆಯಿಂದಾಗಿ ಈ ಗಮನಾರ್ಹ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ.

ಈ ಆದಾಯದ ಬೆಳವಣಿಗೆಯಿಂದಾಗಿ ಸರ್ಕಾರವು ಈ ವರ್ಷ ಉತ್ತಮ ಆಯವ್ಯಯ ಮಂಡಿಸಲು ಅನುವು ಮಾಡಿಕೊಡಲಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

## ಕಿಸಾನ್ ಡ್ರೋನ್ ಪ್ರಚಾರಕ್ಕೆ 127 ಕೋಟಿ ಬಿಡುಗಡೆ

ಹೊಸದಿಲ್ಲಿ: ದೇಶದಲ್ಲಿ ಆಧುನಿಕ ಕೃಷಿ ಅಳವಡಿಸಿಕೊಂಡಿರುವ ರೈತರಿಗೆ ಕೇಂದ್ರ ಸರಕಾರ ಆಶಾದಾಯಕ ಸುದ್ದಿ ನೀಡಿದೆ. ಕಿಸಾನ್ ಡ್ರೋನ್ ಪ್ರಚಾರಕ್ಕಾಗಿ ಇದುವರೆಗೆ ಬಂದಿರುವ ಪ್ರಸ್ತಾವನೆಗಳ ಆಧಾರದಲ್ಲಿ ಸುಮಾರು 127 ಕೋಟಿ ರೂ. ಬಿಡುಗಡೆ ಮಾಡಿರುವುದಾಗಿ ಕೇಂದ್ರ ಕೃಷಿ ಸಚಿವ ನರೇಂದ್ರ ಸಿಂಗ್ ತೋಮರ್ ತಿಳಿಸಿದ್ದಾರೆ.

ಅವರು ರಾಜ್ಯಸಭೆಗೆ ಈ ಕುರಿತು ಲಿಖಿತ ಉತ್ತರ ನೀಡಿದ್ದಾರೆ. ಸಬ್ಸಿಡಿಯಲ್ಲಿ ರೈತರಿಗೆ ಡ್ರೋನ್‌ಗಳನ್ನು ಪೂರೈಸಲು ರಾಜ್ಯ ಸರ್ಕಾರಗಳಿಗೆ ಅನುದಾನ ನೀಡಲಾಗಿದೆ. ಕೀಟನಾಶಕ ಮತ್ತು ಪೋಷಕಾಂಶಗಳ ಅನ್ವಯಕ್ಕಾಗಿ ಡ್ರೋನ್‌ಗಳನ್ನು ಬಳಸುವ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳನ್ನು ಸಹ ಬಿಡುಗಡೆ ಮಾಡಲಾಗಿದೆ ಎಂದು ತೋಮರ್ ಹೇಳಿದ್ದಾರೆ.

ಬಿಡುಗಡೆಯಾದ ಅನುದಾನದಲ್ಲಿ 100 KVK ಗಳು, 75 ICAR ಸಂಸ್ಥೆಗಳು ಮತ್ತು 25 SAU ಗಳ ಮೂಲಕ 75000 ಹೆಕ್ಟೇರ್‌ಗಳಲ್ಲಿ ರೈತರ ಹೊಲಗಳಲ್ಲಿ ತಮ್ಮ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು 52.50 ಕೋಟಿಗಳನ್ನು ICAR ಗೆ ಬಿಡುಗಡೆ ಮಾಡಲಾಗಿದೆ.

ರೈತರಿಗೆ ಡ್ರೋನ್ ಸೇವೆಗಳನ್ನು ಒದಗಿಸಲು ಸಬ್ಸಿಡಿಯಲ್ಲಿ 300 ಕ್ಕೂ ಹೆಚ್ಚು ಕಿಸಾನ್ ಡ್ರೋನ್‌ಗಳನ್ನು ಸರಬರಾಜು ಮಾಡಲು ಮತ್ತು 1500 ಕ್ಕೂ ಹೆಚ್ಚು ಕಿಸಾನ್ ಡ್ರೋನ್ CHC ಗಳನ್ನು ಸ್ಥಾಪಿಸಲು ವಿವಿಧ ರಾಜ್ಯ ಸರ್ಕಾರಗಳಿಗೆ ಬಿಡುಗಡೆ ಮಾಡಿದ ಹಣವನ್ನು ಇದು ಒಳಗೊಂಡಿದೆ.

ಕಿಸಾನ್ ಡ್ರೋನ್‌ಗಳ ಬಳಕೆಯು ಗ್ರಾಮೀಣ ಪ್ರದೇಶದ ಜನರಿಗೆ ಸಾಕಷ್ಟು ಉದ್ಯೋಗಾವಕಾಶಗಳನ್ನು ಒದಗಿಸುವ ಸಾಮರ್ಥ್ಯವನ್ನು ಹೊಂದಿದೆ ಎಂದು ಅವರು ತಿಳಿಸಿದ್ದಾರೆ.


ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆ (DA&FW) ರೈತರಿಂದ ಕಿಸಾನ್ ಡ್ರೋನ್‌ಗಳನ್ನು ಅಳವಡಿಸಿಕೊಳ್ಳುವುದನ್ನು ಉತ್ತೇಜಿಸುತ್ತಿದೆ ಎಂದು ಮಾಹಿತಿ ನೀಡಿದ ತೋಮರ್, ಕೀಟನಾಶಕ ಮತ್ತು ಪೋಷಕಾಂಶಗಳ ಅನ್ವಯಕ್ಕಾಗಿ ಡ್ರೋನ್‌ಗಳ ಪರಿಣಾಮಕಾರಿ ಮತ್ತು ಸುರಕ್ಷಿತ ಕಾರ್ಯಾಚರಣೆಗಳಿಗೆ ಸಂಕ್ಷಿಪ್ತ ಸೂಚನೆಗಳನ್ನು ಒದಗಿಸುವ ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೊಸೀಜರ್‌ಗಳನ್ನು (SOPs) ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

## ಹೊಸ ತೆರಿಗೆ ಪದ್ಧತಿ ಮಧ್ಯಮ ವರ್ಗದವರಿಗೆ ಲಾಭದಾಯಕ

ನವದೆಹಲಿ: ಹೊಸ ತೆರಿಗೆ ಪದ್ಧತಿಯಲ್ಲಿ ಮಧ್ಯಮ ವರ್ಗದವರ ಕೈಯಲ್ಲಿ ಹೆಚ್ಚಿನ ಹಣವನ್ನು ಬಿಡುವುದರಿಂದ ಇದು ಅವರಿಗೆ ಲಾಭದಾಯಕವಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ಯೋಜನೆಗಳ ಮೂಲಕ ಹೂಡಿಕೆ ಮಾಡಲು ವ್ಯಕ್ತಿಗಳನ್ನು ಪ್ರೇರೇಪಿಸುವುದು ಅನಿವಾರ್ಯವಲ್ಲ ಆದರೆ ಹೂಡಿಕೆಯ ಬಗ್ಗೆ ವೈಯಕ್ತಿಕ ನಿರ್ಧಾರವನ್ನು ತೆಗೆದುಕೊಳ್ಳಲು ಅವರಿಗೆ ಅವಕಾಶವನ್ನು ನೀಡುತ್ತದೆ ಎಂದು ಹೇಳಿದರು.

ಮುಂದಿನ ಆರ್ಥಿಕ ವರ್ಷದಿಂದ ಜಾರಿಗೆ ಬರಲಿರುವ ಪರಿಷ್ಕೃತ ರಿಯಾಯಿತಿ ತೆರಿಗೆ ಪದ್ಧತಿಯಡಿ ರೂ. 3 ಲಕ್ಷದವರೆಗಿನ ಆದಾಯದ ಮೇಲೆ ಯಾವುದೇ ತೆರಿಗೆ ವಿಧಿಸಲಾಗುವುದಿಲ್ಲ.



ರೂ.3-6 ಲಕ್ಷದ ನಡುವೆ ಶೇ. 5 ರಷ್ಟು ತೆರಿಗೆ ವಿಧಿಸಲಾಗುತ್ತದೆ. ರೂ. 6-9 ಲಕ್ಷದ ನಡುವೆ ಶೇ. 10, ರೂ. 9-12 ಲಕ್ಷದ ನಡುವೆ ಶೇ. 15, ರೂ. 12-15 ಲಕ್ಷದ ನಡುವೆ ಶೇ. 20 ರಷ್ಟು ಮತ್ತು ರೂ. 15ಲಕ್ಷಕ್ಕೂ ಮೇಲ್ಪಟ್ಟ ಆದಾಯಕ್ಕೆ ಶೇ. 30 ರಷ್ಟು ತೆರಿಗೆ ವಿಧಿಸಲಾಗುತ್ತದೆ. ಆದಾಗ್ಯೂ, 7 ಲಕ್ಷದವರೆಗಿನ ವಾರ್ಷಿಕ ಆದಾಯದ ಮೇಲೆ ಯಾವುದೇ ತೆರಿಗೆ ವಿಧಿಸಲಾಗುವುದಿಲ್ಲ ಎಂದರು.

ಅದಾನಿ ಗ್ರೂಪ್ ಬಿಕ್ಕಟ್ಟಿನ ಕುರಿತು ಪ್ರಶ್ನೆಗೆ ಉತ್ತರಿಸಿದ ಸಚಿವರು, ಭಾರತೀಯ ನಿಯಂತ್ರಕರು ಬಹಳ ಅನುಭವಿಗಳು ಮತ್ತು ಅವರು ತಮ್ಮ ಕ್ಷೇತ್ರದಲ್ಲಿ ಪರಿಣಿತರು. ನಿಯಂತ್ರಕರು ಈ ಸಮಸ್ಯೆಯನ್ನು ಬಗೆಹರಿಸಲಿದ್ದಾರೆ ಎಂದು ಹಣಕಾಸು ಸಚಿವರು ತಿಳಿಸಿದರು.

ಬೆಲೆ ಏರಿಕೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್, 2023-24ರಲ್ಲಿ ಚಿಲ್ಲರೆ ಹಣದುಬ್ಬರ ಶೇಕಡಾ 5.3 ರಷ್ಟು ಇರಬಹುದೆಂದು ನಿರೀಕ್ಷಿಸಲಾಗಿದೆ ಮತ್ತು ಕಚ್ಚಾ ಬೆಲೆಗಳು ಸೌಮ್ಯವಾಗಿ ಉಳಿದರೆ ಮತ್ತಷ್ಟು ಕುಸಿಯಬಹುದು ಎಂದು ಹೇಳಿದರು.

ಮುಂದಿನ ಹಣಕಾಸು ವರ್ಷದಲ್ಲಿ ಹಣದುಬ್ಬರ ಅಂದಾಜಿಗಾಗಿ ಆರ್‌ಬಿಐ ಪ್ರತಿ ಬ್ಯಾರೆಲ್ ಕಚ್ಚಾ ತೈಲದ ದರವನ್ನು 95 ಅಮೆರಿಕನ್ ಡಾಲರ್ ಗೆ ನಿರೀಕ್ಷಿಸಿದೆ ಎಂದು ಅವರು ತಿಳಿಸಿದರು.

# ಗಡಿ ಅಭಿವೃದ್ಧಿಗೆ ವಿಶೇಷ ಅನುದಾನ ನೀಡಿದ್ದೇನೆ: ಸಚಿವ ರಾಮುಲು

ಬಳ್ಳಾರಿ : ಕನ್ನಡ ನಾಡು ನುಡಿಯನ್ನು ಮತ್ತಷ್ಟು ಶ್ರೀಮಂತಗೊಳಿಸಬೇಕಿದೆ ಅದು ಎಲ್ಲಾ ಕನ್ನಡಿಗರ ಜವಾಬ್ದಾರಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಿ.ಶ್ರೀರಾಮುಲು ತಿಳಿಸಿದರು.




ನಗರದ ರಾಘವ ಕಲಾ ಮಂದಿರದಲ್ಲಿ ಹಮ್ಮಿಕೊಂಡಿದ್ದ ಬಳ್ಳಾರಿ ತಾಲೂಕಿನ ಆರನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿನ ಉದ್ದಿಮೆಗಳಲ್ಲಿ ಶೇ 80 ರಷ್ಟು ಉದ್ಯೋಗವನ್ನು ಕನ್ನಡಿಗರಿಗೆ ಒದಗಿಸುವಲ್ಲಿ ಸರ್ಕಾರ ಬದ್ಧವಾಗಿದೆಂದರು.

ಗಡಿ ಅಭಿವೃದ್ಧಿಗೆ ವಿಶೇಷ ಅನುದಾನ ನೀಡಿದೆ. ಕನ್ನಡ ನಾಡಿನ ಗಡಿ ಭಾಗದ ಶಾಲೆಗಳ ಅಭಿವೃದ್ಧಿಗೆ 400 ಕೋಟಿ ರೂ ಅನುದಾನವನ್ನು ಮುಖ್ಯ ಮಂತ್ರಿ ಬಸವರಾಜ್ ಬೊಮ್ಮಾಯಿ ಅವರು ಘೋಷಣೆ ಮಾಡಿದ್ದಾರೆಂದರು. ಕರ್ನಾಟಕ ಏಕೀಕರಣದ ಹೋರಾಟಗಾರರ ಬಗ್ಗೆ ಸ್ಮರಿಸುತ್ತ ಪಿಂಜಾರ್ ರಂಜಾನಾ ಸಾಬ್ ಅವರು ಹುತಾತ್ಮರಾದುದನ್ನು ಮೆಲುಕು ಹಾಕಿದರು. ಅವರ ಸದಾ ಸ್ಮರಣೆಗಾಗಿ ಶಾಸಕ ಸೋಮಶೇಖರ ರೆಡ್ಡಿ ಅವರ ಅಭಿಲಾಷೆಯಂತೆ ರಂಜಾನ್ ಸಾಬ್ ಅವರ ಪುತ್ಥಳಿಯನ್ನು ನಗರದಲ್ಲಿ ಅನಾವರಣ ಮಾಡಿದೆ. ನಿಷ್ಠಿ ರುದ್ರಪ್ಪನವರ ಬೇಡಿ–ಕೆಯಂತೆ ಕಸಾಪದ ಎಲ್ಲಾ ಜಿಲ್ಲಾ ಅಧ್ಯಕ್ಷರುಗಳಿಗೆ ಉಚಿತ ಬಸ್ ಪಾಸ್ ನೀಡಿದೆಂದು ಹೇಳಿದರು.

ನಗರ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಮಾತನಾಡಿ, ಕಳೆದ 50 ವರ್ಷಗಳಿಗೂ ಹೆಚ್ಚು ಕಲಾದಿಂದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಬಳ್ಳಾರಿಯಲ್ಲಿ ನಡೆದಿಲ್ಲ. ಅದನ್ನು ನಡೆಸುವ ಅಭಿಲಾಷೆ ನಮ್ಮದಾಗಿದೆ. ಇದಕ್ಕೆ ಪರಿಷತ್ ಅವಕಾಶ ಕಲ್ಪಿಸಿಕೊಡಬೇಕು ಎಂದರು.ಮೂಲತಃ ನಮ್ಮ ತಂದೆ ಆಂದ್ರ ಪ್ರದೇಶದವರು, ಅವರು ಇಲ್ಲಿ ಪೊಲೀಸ್ ಉದ್ಯೋಗಿಯಾಗಿ ನಾವು ಕನ್ನಡ ನಾಡಿನಲ್ಲಿ ಜನ್ಮಿಸಿದ್ದೇವೆ. ನಮ್ಮ ತಂದೆ ನಿವೃತ್ತಿ ನಂತರ ಆಂಧ್ರಪ್ರದೇಶ ಹೋಗಲು ಬಯಸಿದ್ದರು. ಆದರೆ ತಾಯಿ ನಿರಾಕರಿಸಿದರು.

ಇಲ್ಲಿಯೇ ಬೆಳೆದು ನಿಮ್ಮೆಲ್ಲರ ಸಹಕಾರದಿಂದ ಉತ್ತಮ ಸ್ಥಾನ ಮಾನ ಪಡೆದ ನಾವು ಕನ್ನಡಿಗರಿಗೆ ಸದಾ ಋಣಿಗಳು ಎಂದರು.

ಈ ಸಂದರ್ಭದಲ್ಲಿ ಕಲಾವಿದ ಮಂಜುನಾಥ ಗೋವಿಂದವಾಡ, ಕಾರ್ಯಕ್ರಮ ನಿರೂಪಕ ಡಿ.ವಿನೋದ್ ಅವರನ್ನು ಪರಿಷತ್ತನಿಂದ ಸನ್ಮಾನಿಸಿ ಗೌರವಿಸಲಾಯಿತು. ವೇದಿಕೆಯಲ್ಲಿ ಸಮ್ಮೇಳನದ ಅಧ್ಯಕ್ಷ ರಮೇಶ್ ಗೌಡ ಪಾಟೀಲ್ ಮತ್ತವರ ಪತ್ನಿ, ರಾಘವ ಮೆಮೋರಿಯಲ್ ಅಸೋಸಿಯೇಷನ್ ಗೌರವ ಅಧ್ಯಕ್ಷ ಕೆ.ಚೆನ್ನಪ್ಪ, ಅಧ್ಯಕ್ಷ ಕೆ.ಕೋಟೇಶ್ವರ ರಾವ್, ಜನತಾ ಬಜಾರ್ ಅಧ್ಯಕ್ಷ ಜಿ.ನೀಲಕಂಠಪ್ಪ, ಕಸಾಪ ಜಿಲ್ಲಾ ಅಧ್ಯಕ್ಷ ನಿಷ್ಠಿ ರುದ್ರಪ್ಪ, ತಾಲೂಕು ಅಧ್ಯಕ್ಷ ಜೆ.ವಿ.ನಾಗಿರೆಡ್ಡಿ, ಮಾಜಿ ಜಿಲ್ಲಾ ಅಧ್ಯಕ್ಷ ಹೆಚ್.ಹಂಪನಗೌಡ, ರಾಮಚಂದ್ರ, ಅಂಜಿನಿ, ಡಾ. ಶಿವಲಿಂಗಪ್ಪ ಹಂದ್ಯಾಳ್ ಮೊದಲಾದವರು ಇದ್ದರು.

## 6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ್ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು.

ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಮುದಾಯ ಭವನಕ್ಕೆ ಸೋಮಶೇಖರರೆಡ್ಡಿ ಭೂಮಿ ಪೂಜೆ



ಬಳ್ಳಾರಿ : ಬಳ್ಳಾರಿ ನಗರದ ಕಪ್ಪಗಲ್ಲು ರಸ್ತೆಯಲ್ಲಿ ಖಾಸಗಿ ಲೇಔಟ್ ಒಂದರಲ್ಲಿನ ನಿವೇಶನದಲ್ಲಿ ಬಳ್ಳಾರಿ ನಗರದ ನಿವೃತ್ತ ಪೊಲೀಸ್ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಸಮುದಾಯ ಭವನಕ್ಕೆ ನಗರ ಶಾಸಕ ಗಾಲಿ ಸೋಮಶೇಖರರೆಡ್ಡಿ ಶನಿವಾರದಂದು ಭೂಮಿಪೂಜೆ ನೆರವೇರಿಸಿದರು.

ಈ ಲೇಔಟ್ ಸಿ.ಎ ನಿವೇಶನವನ್ನು ಸ್ವತಃ ಶಾಸಕರೇ ಸಂಘಕ್ಕೆ ಕೊಡುಗೆಯಾಗಿ ನೀಡಿದ್ದಾರಂತೆ. ಈಗ ಇಲ್ಲಿ ಸಮುದಾಯ ಭವನ ನಿರ್ಮಿಸಲು ಶಾಸಕರ ಅನುದಾನದಡಿ 10 ಲಕ್ಷ ರೂ ನೀಡಿ ಕಾಮಗಾರಿಗೆ ಚಾಲನೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯ ಕೆ.ಹನುಮಂತಪ್ಪ, ಪೊಲೀಸ್ ನಿವೃತ್ತ ಅಧಿಕಾರಿಗಳ ಸಂಘದ ಪದಾಧಿಕಾರಿಗಳು ಇದ್ದರು.

## ಎನ್.ಸಿ.ಸಿ ಅಧಿಕಾರಿಗೆ ಪ್ರಶಸ್ತಿ ಪ್ರಧಾನ ಸಮಾರಂಭ

ಬಳ್ಳಾರಿ : ಬೆಸ್ಟ್ ಸಂಸ್ಥೆಯ ಎನ್.ಸಿ.ಸಿ ಅಧಿಕಾರಿಯಾದ ಕಿರಣ್ ಕುಮಾರ್ ಎನ್.ಆರ್. ರವರು ನೀಡಿದ ಸೇವೆಯನ್ನು ಪರಿಗಣಿಸಿ 2022–23 ನೇ ಸಾಲಿಗೆ ಕರ್ನಾಟಕ ರಾಜ್ಯ ಮುಖ್ಯಮಂತ್ರಿಗಳ ಪದಕ ಹಾಗೂ ಪ್ರಶಂಸನಾ ಪುರಸ್ಕಾರವನ್ನು ನೀಡಿ ಗೌರವಿಸಲಾಯಿತು.

ಈ ಹಿಂದೆ ಮಹಾರಾಷ್ಟ್ರದ ನಾಗಪುರದಲ್ಲಿ 3 ತಿಂಗಳ ಕಠಿಣ ತರಬೇತಿಯಲ್ಲಿ ಭಾಗವಹಿಸಿದ್ದು ಆಫಿಸರ್ ಟ್ರೈನಿಂಗ್ ಅಕಾಡಮಿ ಇವರು, ದೆಹಲಿಯಿಂದ ನೀಡಲ್ಪಡುವ ಅತ್ಯುನ್ನತ ಪುರಸ್ಕಾರವಾದ ಡಿ.ಜಿ.ಬ್ಯಾಟನ್ (ಚಿನ್ನದ ಪದಕ)ವನ್ನು ಪಡೆದಿರುತ್ತಾರೆ. ಕಳೆದ ವರ್ಷ ನವೆಂಬರ್‌ನಲ್ಲಿ 1 ತಿಂಗಳ ತರಬೇತಿಯಲ್ಲಿ ರಾಷ್ಟ್ರಮಟ್ಟದಲ್ಲಿ ಚಿನ್ನದ ಪದಕವನ್ನು ಪಡೆದಿರುತ್ತಾರೆ. ಜಿಲ್ಲೆಗೆ ಇದೇ ಪ್ರಥಮ ಬಾರಿಗೆ ಹಾಗೂ ಕರ್ನಾಟಕ ರಾಜ್ಯಕ್ಕೆ 20 ವರ್ಷಗಳ ನಂತರ, ರಾಷ್ಟ್ರಮಟ್ಟದಲ್ಲಿ ಪುರಸ್ಕಾರ ಪಡೆದ ಕೀರ್ತಿ ಇವರದು.

ಒಟ್ಟಾರೆ ರಾಷ್ಟ್ರಮಟ್ಟದಲ್ಲಿ 2 ಬಾರಿ ಚಿನ್ನದ ಪದಕ ಹಾಗೂ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯವರ ಪ್ರಶಂಸನಾ ಪದಕ ಪಡೆದರು. ಬೆಸ್ಟ್ ಸಂಸ್ಥೆಯ ಅದ್ಯಕ್ಷರಾದ ಕೊನಂಕಿ ರಾಮಪ್ಪನವರು ಉಪಾದ್ಯಕ್ಷರಾದ



ಕೊನಂಕಿ ತಿಲಕ್‌ಕುಮಾರ್‌ರವರು, ಕಾರ್ಯದರ್ಶಿಗಳಾದ ಮನ್ನೆ ಶ್ರೀನಿವಾಸುಲು, ಕಾಲೇಜಿನ ಪ್ರಾಂಶುಪಾಲರಾದ ಕೆ.ವೆಂಕಟೇಶ್ವರರಾವ್, ಉಪಪ್ರಾಂಶುಪಾಲರಾದ ಜಿ.ಶ್ರೀನಿವಾಸರೆಡ್ಡಿ ಮತ್ತು ಶಾಲಾ ಆಡಳಿತಾಧಿಕಾರಿಗಳಾದ ಶ್ರೀಮತಿ ವಿಜಯಲಕ್ಷ್ಮಿ, ಶ್ರೀಮತಿ. ರತ್ನ, ಮುಖ್ಯಸ್ಥರಾದ ಶ್ರೀಮತಿ. ಅರುಣ ಮತ್ತು ಲೋಕಪ್ಪ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಇವರನ್ನು ಅಭಿನಂದಿಸಿದ್ದಾರೆ.

## ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ.ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಿಕ್ಕನಾಯಕನ ಹಳ್ಳಿಯಂತೆ ಹುಳಿಯಾರು ಪಟ್ಟಣ ಅಭಿವೃದ್ಧಿ ಆಗಬೇಕು

ಹುಳಿಯಾರು: ಚಿಕ್ಕನಾಯಕನಹಳ್ಳಿ ಪಟ್ಟಣದಂತೆ ಹುಳಿಯಾರು ಪಟ್ಟಣವನ್ನು ಅಭಿವೃದ್ಧಿ ಆಗಬೇಕಿದೆ. ಈ ನಿಟ್ಟಿನಲ್ಲಿ ಈಗಾಗಲೇ ನೂತನ ಪೊಲೀಸ್ ಠಾಣಾ ಕಟ್ಟಡ ನಿರ್ಮಿಸಿದ್ದು 50 ಹಾಸಿಗೆಯ ಆಸ್ಪತ್ರೆ ಮಂಜೂರು ಮಾಡಿಸಿದ್ದು ಶೀರ್ಘದಲ್ಲೇ ಶಂಕುಸ್ಥಾಪನೆ ನೆರವೇರಿಸಲಾಗುವುದು. ಅಲ್ಲದೆ ಪಟ್ಟಣ ಪಂಚಾಯ್ತಿಗೆ ನೂತನ ಕಟ್ಟಣ ನಿರ್ಮಾಣಕ್ಕೆ 3 ಕೋಟಿ ರೂ. ಮಂಜೂರು ಮಾಡಿಸಲಾಗಿದೆ ಎಂದು ಸಚಿವರಾದ ಜೆ.ಸಿ.ಮಾಧುಸ್ವಾಮಿ ತಿಳಿಸಿದರು.




ಹುಳಿಯಾರು ಪಪಂ ಕಛೇರಿಯ ಬಳಿ ಶನಿವಾರ ಮನೆ ಮಂಜೂರಾತಿ ಮತ್ತು ಕಾಮಗಾರಿ ಆದೇಶ ಪತ್ರ ವಿತರಣೆ ಹಾಗೂ ಎಸ್‌ಸಿಎಸ್‌ಟಿ ಫಲಾನುಭವಿಗಳಿಗೆ ಅಡಿಗೆ ಅನಿಲ ಸಂಪರ್ಕ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗ್ರಾಮ ಪಂಚಾಯ್ತಿಯಾಗಿದ್ದ ಹುಳಿಯಾರನ್ನು ಯಾವುದೇ ಪ್ಲಾನ್ ಇಲ್ಲದೆ ದಿಡೀರ್ ಪಟ್ಟಣ ಪಂಚಾಯ್ತಿಯಾಗಿ ಮೇಲ್ದರ್ಜೆಗೇರಿಸಿದರು. ಪರಿಣಾಮ ನಿರಾಶ್ರೀತರಿಗೆ ಮನೆ ಕಟ್ಟಿಕೊಡಲು ನಿವೇಶನ ಇಲ್ಲ, ರಸ್ತೆ ಮಾಡುವಾಗ ಅನಿವಾರ್ಯವಾಗಿ ಶೌಚಾಲಯ, ಕಾಂಪೌಂಡ್ ಹೊಡೆಯಬೇಕಿದೆ.

ಹೀಗೆ ಅಭಿವೃದ್ಧಿ ಕೆಲಸ ಮಾಡುವಾಗ ಅನೇಕ ತೊಡಕುಗಳಾಗುತ್ತಿವೆ. ಆದರೂ ರಸ್ತೆ ಮತ್ತು ಚರಂಡಿ ವ್ಯವಸ್ಥೆಯನ್ನು ಈಗಾಗಲೇ ಬಹುಪಾಲು ಪೂರೈಸಲಾಗಿದೆ. ಇನ್ನೂ ಕೆಲಸಗಳು ಮಾಡಬೇಕಿದ್ದು ನಿಮ್ಮೆಲ್ಲರ ಸಹಕಾರ ಕೊಟ್ಟರೆ ಚಿಕ್ಕನಾಯಕನಹಳ್ಳಿಯಂತೆ ಹುಳಿಯಾರನ್ನೂ ಪಟ್ಟಣದ ರೀತಿ ಕಾಣುವಂತೆ ಮಾಡುತ್ತೇನೆ ಎಂದರು.

ಬೋರನಕಣಿವೆ ಜಲಾಶಯದಿಂದ ಹುಳಿಯಾರು ಪಟ್ಟಣಕ್ಕೆ ನೀರು ಪೂರೈಸುತ್ತಿದ್ದರೂ ಸಹ ಇಲ್ಲಿನ ನಿವಾಸಿಗಳಿಗೆ ಸಮರ್ಪಕವಾಗಿ ನೀರನ್ನು ಕೊಡಲಾಗುತ್ತಿಲ್ಲ. ಕೊಡುತ್ತಿರುವ ನೀರನ್ನೂ ಸಹ ಶುದ್ಧಿಕರಿಸಿ ಕೊಡಲಾಗುತ್ತಿಲ್ಲ.

ಈ ವ್ಯವಸ್ಥೆಯನ್ನು ಪುನಶ್ಚೇತನಗೊಳಿಸಿ ಶುದ್ಧ ಹಾಗೂ ಸಮರ್ಪಕ ನೀರು ಪೂರೈಸಲು ಅರ್ಬನ್ ವಾಟರ್ ಸಪ್ಲೈ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದರಲ್ಲದೆ ಹುಳಿಯಾರಿನಲ್ಲಿ ಅನೇಕ ಸಮಸ್ಯೆಗಳಿದ್ದು ಎಲ್ಲವನ್ನೂ ಒಂದೇ ಬಾರಿ ಪರಿಹರಿಸಲು ಸಾಧ್ಯವಿಲ್ಲ. ಹಂತಹಂತವಾಗಿ ಪರಿಹರಿಸುವುದಾಗಿ ತಿಳಿಸಿದರು.

ಚಿಕ್ಕನಾಯಕನಹಳ್ಳಿ ಪಟ್ಟಣದಲ್ಲಿ ಈ ಹಿಂದೆ ತಾನು ಮೀಸಲಿಟ್ಟ 6 ಎಕರೆ ಜಮೀನಿನಲ್ಲಿ ಒಂದೇ ನಿವೇಶನದಲ್ಲಿ ಮೇಲೆಕೆಳಗೆ ಇಬ್ಬರು ಮನೆ ಕಟ್ಟಿಕೊಳ್ಳುವಂತೆ ಮನವೊಲಿಸಿ 400 ಮನೆಗಳನ್ನು ಅಲ್ಪಸಂಖ್ಯಾತರಿಗೆ ಕಟ್ಟಿಸುತ್ತಿದ್ದೇವೆ.

ಆದರೆ ಹುಳಿಯಾರಿನ ಅಲ್ಪಸಂಖ್ಯಾತರಿಗೆ ಈ ರೀತಿ ಮನೆ ಕಟ್ಟಿಸಿಕೊಡಲು ಸಾಧ್ಯವಾಗಲಿಲ್ಲ. ಆದರೂ ನಿವೇಶನ ಉಳ್ಳವರು ಮನೆ ಕಟ್ಟಿಕೊಳ್ಳಲು ಮುಂದೆ ಬಂದರೆ ಸ್ಲಂ ಬೋರ್ಡ್‌ನಿಂತ ಗ್ರ್ಯಾಂಟ್ ಕೊಡಿಸುವುದಾಗಿ ಭರವಸೆ ನೀಡಿದರಲ್ಲದೆ ಹುಳಿಯಾರು ಪಂಚಾಯ್ತಿಯವರು ಮನೆ ಕಟ್ಟಿಕೊಳ್ಳಲು ನಿವೇಶನ ಗುರುತಿಸಿ ಕೊಟ್ಟ–ರೆ ಇಲ್ಲಿಗೂ ಐದಾರು ನೂರು ಮನೆ ಮಂಜೂರು ಮಾಡಿಸುವುದಾಗಿ ತಿಳಿಸಿದರು.

ಪಪಂ ಅಧ್ಯಕ್ಷ ಕೆಎಂಎಲ್ ಕಿರಣ್, ಉಪಾಧ್ಯಕ್ಷೆ ಶೃತಿಸನತ್, ಸದಸ್ಯರುಗಳಾದ ಬೀಬೀಫಾತೀಮಾ, ರಾಜು ಬಡಗಿ, ಸಂಧ್ಯ, ಬಳೆದಾಸಪ್ಪ, ಗೀತಾ ಅಶೋಕ್‌ಬಾಬು, ರತ್ನಮ್ಮ, ತಾಪಂ ಮಾಜಿ ಸದಸ್ಯ ಕೆಂಕೆರೆ ನವೀನ್, ವಸಂತಯ್ಯ, ಮುಖ್ಯಾಧಿಕಾರಿ ಭೂತಪ್ಪ, ಎಂಜಿನಿಯರ್ ಮಂಜುನಾಥ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ

ಬೆಳಗಾವಿ: ನಗರದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022–23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್–ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಜನವರಿ 31/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,28/2023 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ https://ssp.postmatric.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಅದೇಶಗಳ ಬಗ್ಗೆ ಮಾಹಿತಿಗಾಗಿ ನೀಡಬೇಕಾದ ವೆಬ್ ಸೈಟ್ https://bcwd.karnataka.gov.in , ಇಲಾಖಾ ಸಹಾಯವಾಣಿ ಸಂಖ್ಯೆ : 8050770005. ಹಾಗೂ ಇಲಾಖಾ ಇಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ: 080–35254757 ಇಮೇಲ್: postmetrichelp@karnataka.gov.in ಗೆ ಸಂರ್ಪಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಭ್ಯರ್ಥಿ ಶ್ರೀಮತಿ ಲಕ್ಷ್ಮಿಅರುಣ ನೇತೃತ್ವದಲ್ಲಿ ಮಹಿಳಾ ಸಮಾವೇಶ



ಬಳ್ಳಾರಿ : ಬಳ್ಳಾರಿ ನಗರದ ನಕ್ಷತ್ರ ಹೋಟೆಲಲ್ಲಿ ಶ್ರೀಮತಿ ಲಕ್ಷ್ಮಿಅರುಣ ಜನಾರ್ಧನ್ ರೆಡ್ಡಿ ಅವರು ಹಾಗೂ ಜಿಲ್ಲಾಧ್ಯಕ್ಷರಾದ ಗೋನಾಳ್ ರಾಜಶೇಖರ್ ಗೌಡ ರವರ ಅಧ್ಯಕ್ಷತೆಯಲ್ಲಿ ಮಹಿಳಾ ಶಕ್ತಿ ಘಟಕದ ಅಧ್ಯಕ್ಷರಾದ ಶ್ರೀಮತಿ ಹಂಪಿರಮಣರವರ ನೇತೃತ್ವದಲ್ಲಿ ಮಹಿಳಾ ಸಮಾವೇಶ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಮತಿ ಲಕ್ಷ್ಮಿ ಅರುಣ ಜನಾರ್ದನರೆಡ್ಡಿಯವರು 2008ರಲ್ಲಿ ಜನಾರ್ದನ್ ರೆಡ್ಡಿ ಅವರು ಕಂಡ ಕನಸುಗಳು ನನಸಾಗಬೇಕು ಅವುಗಳನ್ನು ಈಡೇರಿಸುವ ಸಲುವಾಗಿ ಕೃಷಿ ಮಾಡಬೇಕು, ಮಹಿಳಾ ಸಮಾನತೆ ಅದು ಮಹಿಳಾ ಮೀಸಲಾತಿ ಬಗ್ಗೆ ಕಾರ್ಯಕ್ರಮ ರೂಪಿಸುವುದು, ಗೆಳೆಯರ ಬೆಂಬಲವಾಗಿ ನಿಲ್ಲುವುದು, ಬಳ್ಳಾರಿ ನಗರವನ್ನು ಸುಂದರ ಸ್ವಚ್ಛ ಮತ್ತು ಹಸಿರು ನಗರವನ್ನಾಗಿ ಮಾಡಬೇಕು ಎಂಬುದು ನನ್ನ ಆಶಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜನಾರ್ದನ್ ರೆಡ್ಡಿ ಅವರ ಸುಪುತ್ರಿ ಶ್ರೀಮತಿ ಬ್ರಾಹ್ಮಿಣಿ ರಾಜೀವ್ ರೆಡ್ಡಿಯವರು ಮಾತನಾಡುತ್ತಾ ಅಲ್ಲಂ ಸುಮಂಗಳಮ್ಮನವರು, ಶ್ರೀಮತಿ ಶಾರದ ಮಳೆ ಬೆನ್ನೂರು ನಂತರ ಮಹಿಳಾ ಅಭ್ಯರ್ಥಿಯಾಗಿ ನನ್ನ ತಾಯಿ ನಗರದಲ್ಲಿ ಸ್ಪರ್ಧಿಸುತ್ತಿದ್ದಾರೆ.

ಎಲ್ಲಾ ಮಹಿಳಾ ಮಣಿಗಳು ನನ್ನ ತಾಯಿಯನ್ನು ಬೆಂಬಲಿಸಿ ಅವರ ಗೆಲುವಿಗೆ ಶ್ರಮಿಸಬೇಕು ಎಂದು ಕೋರಿದರು.

ಕಾರ್ಯಕ್ರಮದಲ್ಲಿ ನಗರದ ಮಹಿಳೆಯರು ಮಾತನಾಡಿ ಸನ್ಮಾನ್ಯ ಜನಾರ್ಧನ್ ರೆಡ್ಡಿ ಅವರ ದೂರ ದೃಷ್ಟಿ ಅಭಿವೃದ್ಧಿ ಜೊತೆಗೆ ಮಹಿಳಾ ಸಬಲೀಕರಣಕ್ಕಾಗಿ ಶ್ರೀಮತಿ ಲಕ್ಷ್ಮಿ ಅರುಣ ರವರ ಪರ ನಿಲ್ಲಬೇಕು ಎಂಬ ಮಾತುಗಳಾಡಿದರು.

## ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ನೂತನ ಜಿಲ್ಲಾ ಕಚೇರಿ ಉದ್ಘಾಟನೆ



ಬಳ್ಳಾರಿ : ಕೆಆರ್‌ಪಿಪಿ ಬಳ್ಳಾರಿ ಜಿಲ್ಲಾಧ್ಯಕ್ಷರಾದ ಗೋನಾಳ ರಾಜಶೇಖರ ಗೌಡ ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಯಾದ ಶ್ರೀಮತಿ ಲಕ್ಷ್ಮಿಅರುಣ ಜನಾರ್ದನರೆಡ್ಡಿಯವರ ನೇತೃತ್ವದಲ್ಲಿ ಪಕ್ಷದ ಕಚೇರಿಯ ಉದ್ಘಾಟಿಸಲಾಯಿತು.

ಬಳ್ಳಾರಿಯ ಕುಮಾರಸ್ವಾಮಿ ಗುಡಿಯ ಹತ್ತಿರ ವೀರನಗೌಡ ಕಾಲೋನಿಯಲ್ಲಿ ಜನಾರ್ದನರೆಡ್ಡಿಯವರು ಸ್ಥಾಪಿಸಿರುವ "ಕಲ್ಯಾಣ ರಾಜ್ಯ ಪ್ರಗತಿ ಪಕ್ಷ"ದ ನೂತನ ಜಿಲ್ಲಾ ಕಚೇರಿಯನ್ನು ಪಕ್ಷದ ಮುಖಂಡರು, ಕಾರ್ಯಕರ್ತರ ಜೊತೆ ಸೇರಿ ಬಳ್ಳಾರಿ ಕ್ಷೇತ್ರದ ಅಭ್ಯರ್ಥಿ ಶ್ರೀಮತಿ ಲಕ್ಷ್ಮಿಅರುಣ ಜನಾರ್ದನರೆಡ್ಡಿಯವರು ಭಾಗವಹಿಸಿದ್ದರು.

# ಇತರೆ ನಿರ್ಮಾಣ ಕಾರ್ಮಿಕರ ಸಂಘದ ಉದ್ಘಾಟನಾ ಸಮಾರಂಭ

ಹುಳಿಯಾರು: ಕೋವಿಡ್ ನೆಪದಲ್ಲಿ ಫುಡ್‌ಕಿಟ್, ಟೂಲ್‌ಕಿಟ್ ಹೆಸರಲ್ಲಿ ಕಾರ್ಮಿಕ ಇಲಾಖೆಯ ಲಕ್ಷಾಂತರ ರೂ. ಲೂಟಿ ಮಾಡಲಾಗಿದೆ ಆದರೆ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಇದೂವರೆವಿಗೂ ಶೈಕ್ಷಣಿಕ ಧನ ಸಹಾಯದ ಹಣ ಬಿಡುಗಡೆಯಾಗಿಲ್ಲ ಎಂದು ಕಾರ್ಮಿಕರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೌಡರಂಗಪ್ಪ ಅವರು ಆರೋಪಿಸಿದರು.



ಹುಳಿಯಾರು ಹೋಬಳಿಯ ಹೊಸಹಳ್ಳಿಯಲ್ಲಿ ಶನಿವಾರ ಏರ್ಪಡಿಸಿದ್ದ ಭಗತ್‌ಸಿಂಗ್ ಕಟ್ಟಡ ಮತ್ತು ಇತ–ರೆ ನಿರ್ಮಾಣ ಕಾರ್ಮಿಕರ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕೇರಳ ಮತ್ತು ತಮಿಳುನಾಡಿನಲ್ಲಿ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಗಳನ್ನು ರಚನೆ ಮಾಡಿಕೊಂಡು ಕಾರ್ಮಿಕರಿಗೆ ಅನೇಕ ಸೌಲಭ್ಯಗಳನ್ನು ಕೊಡುತ್ತಿದ್ದರು. ದೇವೇಗೌಡರು ಪ್ರಧಾನಿಯಾದಾಗ ಈ ಬಗ್ಗೆ ಮನವಿ ಮಾಡಲಾಗಿ ದೇಶದ ಎಲ್ಲಾ ರಾಜ್ಯಗಳಲ್ಲೂ ಮಂಡಳಿ ರಚಿಸಿ ಸೆಸ್ ಸಂಗ್ರಹ ಮಾಡಿ ಅದರಲ್ಲಿ ಕಾರ್ಮಿಕರ ಕಲ್ಯಾಣ ಕಾರ್ಯಗಳಿಗೆ ಬಳಸುವಂತೆ ಕಾನೂನು ಮಾಡಿದರು. ದೇಶದ ವಿವಿಧ ರಾಜ್ಯಗಳಲ್ಲಿ ಕಾರ್ಮಿಕ ಕಲ್ಯಾಣ ಮಂಡಳಿಗಳನ್ನು ರಚಿಸಲಾಯಿತಾದರೂ ಕರ್ನಾಟಕದಲ್ಲಿ ನೆನೆಗುದಿಗೆ ಬಿತ್ತು. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ತಮ್ಮ ತಂದೆಯ ಕಾನೂನು ನೀವಾದರೂ ಜಾರಿ ಮಾಡಿ ಎಂಬ ಮನವಿಗೆ ಸ್ಪಂದಿಸಿ ಕೇವಲ ಮೂರೇ ತಿಂಗಳಲ್ಲಿ ರಾಜ್ಯದಲ್ಲೂ ಕಲ್ಯಾಣ ಮಂಡಳಿ ರಚಿಸಿದರು ಎಂದು ತಿಳಿಸಿದರು.

ಕಟ್ಟಡ ಕಾರ್ಮಿಕ ಇಲಾಖೆಯಲ್ಲಿ ನೊಂದಣಿ ಮಾಡಿಸಿಕೊಂಡ ಕಾರ್ಮಿಕರಿಗೆ ಅಪಘಾತವಾದರೆ ಚಿಕಿತ್ಸೆಗೆ 2 ಲಕ್ಷ ರೂ. ವರೆವಿಗೆ ನೆರವು, ಅಂಗವಿಕಲರಾದರೆ ಮಾಸಾಶನ, ಮರಣ ಹೊಂದಿದರೆ 5.50 ಲಕ್ಷ, ಸ್ವಾಭಾವಿಕ ಸಾವಿಗೆ 75 ಸಾವಿರ ರೂ. ಸಹಾಯಧನ ನೀಡಲಾಗುವುದು. ಶೈಕ್ಷಣಿಕ ಸೌಲಭ್ಯವಾಗಿ ಇಬ್ಬರು ಮಕ್ಕಳಿಗೆ 1 ನೇ ತರಗತಿಯಿಂದ ಕನಿಷ್ಠ 5 ಸಾವಿರರಂತೆ 75 ಸಾವಿರ ರೂಪಾಯಿಗಳವರೆವಿಗೆ ಸ್ಕಾಲರ್ ಶಿಫ್ ನೀಡಲಾಗುತ್ತದೆ. ಫಲಾನುಭವಿಗಳು ಮದುವೆಯಾದರೆ 60 ಸಾವಿರ ರೂ. ನೀಡುತ್ತಾರೆ. ಹೆರಿಗೆ ಭತ್ಯವಾಗಿ 50 ಸಾವಿರ ರೂ. 60 ವರ್ಷ ದಾಟಿದರೆ ಪೆಕ್ಷನ್ ದೊರೆಯುತ್ತದೆ ಎಂದು ವಿವರಿಸಿದರು.

ಜಿಲ್ಲಾ ಸಂಘಟನಾ ಕಾರ್ಯದರ್ಶಿ ನಾಗಣ್ಣ ಅವರು ಮಾತನಾಡಿ ಕಾರ್ಮಿಕರ ಸಂಘದ ಪದಾಧಿಕಾರಿಗಳನ್ನು ತಮ್ಮ ಸುತ್ತಮುತ್ತಲ ಗ್ರಾಮಗಳ ಅರ್ಹ ಕಾರ್ಮಿಕರನ್ನು ಗುರುತಿಸಿ ಕಾರ್ಡ್ ಮಾಡಿಸಿ ಮಂಡಳಿಯಿಂದ ದೊರೆಯುವ ಸೌಲಭ್ಯಗಳನ್ನು ಕೊಡಿಸಬೇಕು. ಜಿಲ್ಲಾ ಸಂಘದಿಂದ ಈ ಭಾಗಕ್ಕೆ ಅನೇಕ ಕಾರ್ಮಿಕ ಮಂಡಳಿಯಿಂದ ಸೌಲಭ್ಯಗಳನ್ನು ಕೊಡಿಸಿಕೊಡಲಾಗಿದೆ. ರಾಜ್ಯ, ಜಿಲ್ಲಾ, ತಾಲೂಕು ಹಾಗೂ ಗ್ರಾಮ ಘಟಕಗಳನ್ನು ಒಗ್ಗಟ್ಟಾಗಿದ್ದರೆ ಮಂಡಳಿಯಿಂದ ದೊರೆಯುವ ಎಲಾ ಸೌಲಭ್ಯಗಳನ್ನೂ ಅರ್ಹ ಕಾರ್ಮಿಕರಿಗೆ ತಲುಪಿಸಲು ಸಾಧ್ಯ ಎಂದರು.

ತಾಲೂಕು ಸಂಘದ ಅಧ್ಯಕ್ಷ ಕೆ.ಕುಮಾರ್ ಮಾತನಾಡಿ ಹಳ್ಳಿಗಳಲ್ಲಿ ಕಾರ್ಮಿಕರಿದ್ದರೂ ಸಹ ಸರ್ಕಾರದ ಸೌಲಭ್ಯಗಳನ್ನು ಪಡೆಯುತ್ತಿಲ್ಲ. ಇವರೆಲ್ಲರಿಗೂ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸಂಘ ರಚಿಸಲಾಗಿದೆ ಎಂದರು. ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಕಾರ್ಮಿಕರಲ್ಲದವರು ಕಾರ್ಮಿಕರ ಕಾರ್ಡ್ ಮಾಡಿಸಿಕೊಂಡು ಸರ್ಕಾರ ಹಾಗೂ ಮಂಡಳಿಯ ಸೌಲಭ್ಯಗಳಣ್ನು ಪಡೆಯುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಲಾಗುವುದು ಎಂದರು. ಗ್ರಾಪಂ ಸದಸ್ಯ ಪುಟ್ಟಸ್ವಾಮಿ ಅವರು ಮಾತನಾಡಿ ಪಂಚಾಯ್ತಿಯಿಂದ ಕಾರ್ಮಿಕರಿಗೆ ಸಿಗುವ ಸೌಲಭ್ಯಗಳನ್ನು ತಲುಪಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಬಡಗಿ ಕಾರ್ಮಿಕರಾದ ಎಚ್.ಎನ್.ಜಯಣ್ಣ, ಮುದ್ದೋಜಿರಾವ್ ಹಾಗೂ ಹುಳಿಯಾರಿನ ಗಾರೆಕಾರ್ಮಿಕ ವೆಂಕಟೇಶ್ ಅವರನ್ನು ಸನ್ಮಾನಿಸಲಾಯಿತು. ಸೋಮಜ್ಜನಪಾಳ್ಯ ಘಟಕದ ಅಧ್ಯಕ್ಷ ಸಿದ್ಧರಾಮಯ್ಯ, ಕೆ.ಸಿ.ಪಾಳ್ಯ ಸಂಘದ ಶಿವಣ್ಣ, ಗ್ರಾಪಂ ಸದಸ್ಯೆ ಕಲ್ಪನಾ, ಗುಡಿಗೌಡರಾದ ಬಸವರಾಜು, ನಾಗರಾಜು, ಹೊಸಹಳ್ಳಿ ಘಟಕದ ಅಧ್ಯಕ್ಷ ರಾಮು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಲೋಕ ಅದಾಲತ್: ಒಂದಾದ ಮೂರು ಜೋಡಿಗಳು



ಹೊಸಪೇಟೆ: ನಗರದಲ್ಲಿ ಶನಿವಾರ ನಡೆದ ಲೋಕ ಅದಾಲತ್‌ನಲ್ಲಿ ದೂರಾಗಿದ್ದ ಮೂರು ಜೋಡಿಗಳು ಒಂದಾಗಿವೆ.

ಪ್ರಧಾನ ಸಿವಿಲ್ ನ್ಯಾಯಾಲಯದಲ್ಲಿ ವಿವಾಹ ವಿಚ್ಛೇದನಕ್ಕಾಗಿ ಬಿ.ರವಿಕುಮಾರ ವಿರುದ್ಧ ಮಂಗಳಾ ಹಾಗೂ ಎಲ್.ಸುನಿಲ್‌ಕುಮಾರ ವಿರುದ್ಧ ಅಂಬಿಕಾ ಪ್ರಕರಣ ದಾಖಲಿಸಿದ್ದರು. 2ನೇ ಅಪರ ಸಿವಿಲ್ ನ್ಯಾಯಾಲಯದಲ್ಲಿ ಜೀವನಾಂಶಕ್ಕಾಗಿ ಮುಕ್ತಾಬಾಯಿ ಬಂಗಾಳೆ ವಿರುದ್ಧ ಲಕ್ಷ್ಮಿಕಾಂತ ಹೆಬ್ಬಾರ್ ಪ್ರಕರಣ ದಾಖಲಾಗಿಸಲಾಗಿತ್ತು.

ಮೂರು ದಂಪತಿಗಳಿಗೆ ತಿಳಿವಳಿಕೆ ನೀಡಿ ರಾಜೀ ಮಾಡಿ ಪ್ರಕರಣವನ್ನು ಮುಕ್ತಾಯಗೊಳಿಸಲಾಯಿತು. ಪ್ರಧಾನ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರು, ತಾಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷರಾದ ಹೇಮಲತಾ.ಬಿ.ಹುಲ್ಲೂರ, 2ನೇ ಅಪರ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶರಾದ ಸಂಜೀವಕುಮಾರ.ಜಿ ಹಾಗೂ ನ್ಯಾಯಾವಾದಿಗಳಾದ ಕರುಣಾನಿಧಿ, ಎಸ್.ವಿ, ಕೆಸಿಬಿ, ಬಿವಿಪಿ, ರಂಜೀತ್ ಸಿಂಗ್, ಹಾಜಿ ರಾಫಿಯಾ ಜಬೀನ್, ಆಡಳಿತ ಸಹಾಯಕ ಎಸ್.ಬಿ.ಕಮತರ ಇದ್ದರು.

# ಜಾರಕಿಹೊಳಿ ಸಾಮ್ರಾಜ್ಯ ನಿರ್ಮಿಸುವಲ್ಲಿ ಕಲಾಲ ಸಮಾಜದ ಕೊಡುಗೆ ಅಪಾರ: ಬಾಲಚಂದ್ರ ಜಾರಕಿಹೊಳಿ

ಮೂಡಲಗಿ : ಕಳೆದ ಐದು ದಶಕಗಳ ಹಿಂದೆ ನಮ್ಮ ಕುಟುಂಬ ಸ್ಥಾಪಿಸಿರುವ ಸಾಮ್ರಾಜ್ಯದಲ್ಲಿ ಕಲಾಲ ಸಮಾಜದವರ ಪರಿಶ್ರಮ ಅಪಾರವಾಗಿದೆ ಎಂದು ಕೆಎಂಎಫ್ ಅಧ್ಯಕ್ಷ, ಶಾಸಕ ಬಾಲಚಂದ್ರ ಜಾರಕಿಹೊಳಿ ತಿಳಿಸಿದರು.

ಶನಿವಾರದಂದು ತಾಲೂಕಿನ ಕಲ್ಲೋಳಿ ಪಟ್ಟಣದ ನಿಯೋಜಿತ ಬಲಭೀಮ ದೇವರ ಕಲ್ಯಾಣ ಮಂಟಪದಲ್ಲಿ ಮೂಡಲಗಿ ಮತ್ತು ಗೋಕಾಕ ತಾಲೂಕುಗಳ ಸೂರ್ಯವಂಶ ಕ್ಷತ್ರೀಯ ಕಲಾಲ ಸಮಾಜದ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಲಾಲ ಸಮಾಜದವರು ತಮ್ಮ ಕುಟುಂಬದೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದಾರೆ ಎಂದು ಶ್ಲಾಘಿಸಿದರು.

1972 ರಲ್ಲಿ ನಮ್ಮ ತಂದೆಯವರಾದ ದಿ.ಲಕ್ಷ್ಮಣರಾವ್ ಜಾರಕಿಹೊಳಿಯವರು ನಮ್ಮ ಕುಟುಂಬದ ಸಾಮ್ರಾಜ್ಯವನ್ನು ಆರಂಭಿಸಿದರು. ಆರಂಭದ ದಿನಗಳಲ್ಲಿ ನಾವು ಸಮಾಜದ ಮುಖ್ಯವಾಹಿನಿಗೆ ಬರಲು ಕಲಾಲ ಸಮಾಜದವರು ಸಾಕಷ್ಟು ಪರಿಶ್ರಮ ಪಟ್ಟಿದ್ದಾರೆ. ನಾವು ಆರಂಭಿಸಿದ ಉದ್ಯೋಗದ ಬೆಳವಣಿಗೆಯಲ್ಲಿ ಈ ಸಮಾಜವು ನಮಗೆ ತುಂಬ ಸಹಕಾರ ನೀಡುತ್ತಿದೆ. ನಾವೂ ಕೂಡ ಕಲಾಲ ಸಮಾಜದ ಬೆನ್ನಿಗಿದ್ದೇವೆ ಎಂದು ತಿಳಿಸಿದರು.

ದೇಶದ ಉದ್ದಗಲಕ್ಕೂ ಸೂರ್ಯವಂಶ ಕ್ಷತ್ರೀಯ ಸಮಾಜವು ಆವರಿಸಿದೆ. ಪ್ರತಿ ಮೂಲೆ ಮೂಲೆಗಳಲ್ಲೂ ಈ ಸಮಾಜ ಬಾಂಧವರು ತಮ್ಮ ವೃತ್ತಿಯ ಜೊತೆಗೆ ಸಮಾಜ ಸೇವೆಯಲ್ಲಿ ನಿರತರಾಗಿದ್ದಾರೆ. ಅಪ್ಪ ಮಾಡುತ್ತಿರುವ ಕಾಯಕವನ್ನು ಮಕ್ಕಳು ಮುಂದುವರೆಸದೇ ಸಮಾಜದ ಬೆಳವಣಿಗೆಗಳಲ್ಲಿ ಸಮಾಜ ಗುರುತಿಸುವ ಕಾಯಕದಲ್ಲಿ ತೊಡಗಿಕೊಳ್ಳಬೇಕು. ಸಮಾಜವು ಆರ್ಥಿಕವಾಗಿ ಪ್ರಗತಿ ಸಾಧಿಸಿದೆಯಾದರೂ ಶಿಕ್ಷಣದಲ್ಲಿ ಇನ್ನೂ ಮುಂದು ಬರಬೇಕಿದೆ.



ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ಪ್ರಗತಿ ಸಾಧಿಸಬೇಕಿದೆ. ಈ ಸಮಾಜದ ಆಶೋತ್ತರಗಳನ್ನು ಈಡೇರಿಸಲು ನಾನು ಬದ್ಧನಿದ್ದೇನೆ. ನಿಮ್ಮ ಪ್ರೀತಿ, ವಿಶ್ವಾಸಗಳಿಗೆ ಸದಾ ಚಿರಋಣಿಯಾಗಿರುವೆ ಎಂದು ಹೇಳಿದರು.

ಪ್ರತಿ ಸಮಾಜಗಳನ್ನು ಒಂದುಗೂಡಿಸುವ ಕೆಲಸವನ್ನು ನಿರಂತರವಾಗಿ ಮಾಡುತ್ತಿದ್ದೇವೆ. ಸಣ್ಣ ಪುಟ್ಟ ಸಮಾಜಗಳು ಇಂದು ಮುಂದೆ ಬರಬೇಕಿದೆ. ಎಲ್ಲ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾಣಬೇಕಿದೆ.

ಅದಕ್ಕಾಗಿ ಗೋಕಾಕ ಮತ್ತು ಮೂಡಲಗಿ ತಾಲೂಕುಗಳಲ್ಲಿ ಪ್ರತಿ ಸಮಾಜಗಳನ್ನು ಒಗ್ಗೂಡಿಸಿ ಆ ಸಮಾಜಗಳಲ್ಲಿ ಜಾಗೃತಿ ಮೂಡಿಸುವ ಕೆಲಸಗಳನ್ನು ಮಾಡುತ್ತಿದ್ದೇವೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಉಡುಪಿ ರಾಜರಾಜೇಶ್ವರಿ ಸಂಸ್ಥಾನ ಕ್ಷತ್ರೀಯ ಪೀಠದ ವಿಶ್ವಧಿರಾಜ್ ತೀರ್ಥ ಮಹಾಸ್ವಾಮಿಗಳು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಬೆಳಗಾವಿಯ ಹಿರಿಯ ಸಾಹಿತಿ ಡಾ. ಸಿ.ಕೆ. ಜೋರಾಪೂರ, ಸೂರ್ಯವಂಶ ಕ್ಷತ್ರೀಯ ಕಲಾಲ ಸಮಾಜದ ಗೋಕಾಕ ತಾಲೂಕಾ ಅಧ್ಯಕ್ಷ ಕುಬೇಂದ್ರ ಕಲಾಲ, ಪಟ್ಟಣದ ಸಮಾಜದ ಮುಖಂಡ ದತ್ತು ಕಲಾಲ, ಜಿಪಂ ಮಾಜಿ ಅಧ್ಯಕ್ಷ ಬಸಗೌಡ ಪಾಟೀಲ, ಪರಪ್ಪ ಕಡಾಡಿ, ಸಮಾಜದ ಅಧ್ಯಕ್ಷ ಮನೋಹರ ಕಲಾಲ, ಸುಭಾಸ ಕುರಬೇಟ, ಬಸವಂತ ದಾಸನವರ, ಬಸು ಜಗದಾಳ, ಮಾರುತಿ ಸಾವಳೇಕರ, ರಾಜು ಕಲಾಲ, ನಾರಾಯಣ ಕಲಾಲ, ಮನೋಹರ ಬಿ. ಕಲಾಲ, ಶ್ರೀಕಾಂತ ಕಲಾಲ, ಪರಶುರಾಮ ಕಲಾಲ, ಮಾರುತಿ ಕಲಾಲ, ರಮೇಶ ಕಲಾಲ, ದುಂಡಪ್ಪ ಕಲಾಲ, ಅಶೋಕ ಕಲಾಲ, ಭೀಮಶಿ ಕಲಾಲ, ಅಶೋಕ ಗಂ. ಕಲಾಲ, ರಮೇಶ ಕಲಾಲ, ಸುರೇಶ ಕಲಾಲ, ಸಂತೋಷ ಜೋರಾಪೂರ, ಭೀಮಶಿ ಕಲಾಲ, ಲಕ್ಷ್ಮಣ ಕಲಾಲ, ವಿಠ್ಠಲ ಜಾನ್ವೆಕರ, ಮಾರ್ತಂಡ ಪಾಸಲಕರ, ಬಸವರಾಜ ಕಲಾಲ, ಸೇರಿದಂತೆ ಅನೇಕ ಸಮಾಜ ಬಾಂಧವರು ಉಪಸ್ಥಿತರಿದ್ದರು.

ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ಸೂರ್ಯವಂಶ ಕ್ಷತ್ರೀಯ ಕಲಾಲ ಸಮಾಜದ ಪರವಾಗಿ ಲಕ್ಷ್ಮೀಯ ಬೆಳ್ಳಿಯ ವಿಗ್ರಹವನ್ನು ನೀಡಿ ಸನ್ಮಾನಿಸಲಾಯಿತು.

## ಗ್ರಾಮ ಪಂಚಾಯತಿ ಉಪ ಚುನಾವಣೆ: ಅಧಿಸೂಚನೆ ಪ್ರಕಟ

ಬೆಳಗಾವಿ: ಬೆಳಗಾವಿ ಜಿಲ್ಲೆಗೆ ಸಂಭಂದಿಸಿದಂತೆ ವಿವಿಧ ಕಾರಣಗಳಿಂದ ಖಾಲಿ ಇರುವ/ತೆರವಾಗಿರುವ ಗ್ರಾಮ ಪಂಚಾಯತಿ ಸದಸ್ಯ ಸ್ಥಾನಗಳನ್ನು ಭರ್ತಿ ಮಾಡಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಉಪ ಚುನಾವಣೆ –2023 ರ ಅಧಿಸೂಚನೆಯನ್ನು ಹೊರಡಿಸಿರುತ್ತಾರೆ.

ರಾಮದುರ್ಗ ತಾಲೂಕಿನ ನರಸಾಪುರ 1 ಸದಸ್ಯ ಸ್ಥಾನ, ಬೆಳಗಾವಿ ತಾಲೂಕಿನ ಬೆಳಗುಂದಿ, ಹಿರೇಬಾಗೇವಾಡಿ, ಮೋದಗಾ ತಲಾ 1, ಖಾನಾಪುರ 1, ಕಾಗವಾಡ ತಾಲೂಕಿನ ಉಗಾರ ಬದ್ರುಕ 1, ಗೋಕಾಕ್ ತಾಲೂಕಿನ ನಲ್ಲಾನಟ್ಟಿ 1 ಸದಸ್ಯ ಸ್ಥಾನ ಸೇರಿದಂತೆ ಒಟ್ಟು 7 ಗ್ರಾಮ ಪಂಚಾಯತಿ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಯಲಿದೆ.

ನಾಮ ಪತ್ರ ಸಲ್ಲಿಸಲು ದಿನಾಂಕ ಫೆಬ್ರುವರಿ 14, 2023 ಮಂಗಳವಾರ ಕೊನೆಯ ದಿನವಾಗಿರುತ್ತದೆ. ಬುಧವಾರ (ಫೆ.15) ನಾಮ ಪತ್ರ ಪರಿಶೀಲಿಸುವ ಕೊನೆಯ ದಿನಾಂಕವಾಗಿರುತ್ತದೆ.

ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಫೆ.17 ಕೊನೆಯ ದಿನಾಂಕವಾಗಿರುತ್ತದೆ. ಮತದಾನ ಅವಶ್ಯವಿದ್ದರೆ, ಫೆಬ್ರುವರಿ 25 ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಮತದಾನ ನಡೆಸಲಾಗುವುದು.

ಅದೇ ರೀತಿಯಲ್ಲಿ ಮರು ಮತದಾನ ಅವಶ್ಯವಿದ್ದಲ್ಲಿ, ಫೆಬ್ರುವರಿ 27 ರಂದು ಬೆಳಿಗ್ಗೆ 7 ಗಂಟೆಯಿಂದ 5 ಗಂಟೆಯವರೆಗೆ ಮರು ಮತದಾನ ನಡೆಯಲಿವೆ.

ಫೆ.28 ರಂದು ಬೆಳಿಗ್ಗೆ 8 ಗಂಟೆಯಿಂದ ಸಂಬಂಧಿತ ತಾಲೂಕಾ ಕೇಂದ್ರಗಳಲ್ಲಿ ಮತಗಳ ಎಣಿಕೆ ಪ್ರಕ್ರಿಯೆ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾತ್ಕಾಲಿಕ ಯೋಗ ತರಬೇತಿದಾರರ ಹುದ್ದೆಗಳಿಗೆ ಅರ್ಜಿ ಅಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲಾ ಆಯುಷ ಇಲಾಖೆ 16 ಆಯುಷ್ ಆರೋಗ್ಯ & ಕ್ಷೇಮ ಕೇಂದ್ರ ಗಳಿಗೆ ಹಾಗೂ ಇಲಖೆಯ 21 (ನಮ್ಮ ಕ್ಲಿನಿಕ್ ಗಳಿಗೆ) ತಾತ್ಕಾಲಿಕ ಹುದ್ದೆಗಳಿಗೆ ಅರೆಕಾಲಿಕ ಯೋಗ ತರಬೇತಿದಾರರ ನೇಮಕಾತಿ ಮಾಡಿಕೊಳ್ಳಲು ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಆಯುಷ್ ಆರೋಗ್ಯ & ಕ್ಷೇಮ ಕೇಂದ್ರಗಳಿಗೆ ಯೋಗ ತರಬೇತಿದಾರರ 1, ಯೋಗ ತರಬೇತಿದಾರರ 2, ಹುದ್ದೆಗಳಿಗಳನ್ನು ಆಯುಷ್ ನಿರ್ದೇಶನಾಲಯ ಮಾರ್ಗ ಸೂಚಿಯಂತೆ ನೇಮಕ ಮಾಡಿಕೋಳ್ಳಲಾಗುವುದು.

ಜಿಲ್ಲಾ ಆರೋಗ್ಯ ಇಲಾಖೆಯ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ (ನಮ್ಮ ಕ್ಲಿನಿಕ್ ಗಳಿಗೆ) ತಲಾ ಒಬ್ಬರು (ಅರೆಕಾಲಿಕ) ಯೋಗ ತರಬೇತಿದಾರರನ್ನು ಆರೋಗ್ಯ ಇಲಾಖೆಯ ಮಾರ್ಗ ಸೂಚಿಯಂತೆ ನೇಮಕ ಮಾಡಿಕೋಳ್ಳಲಾಗುವುದು.

ಅರ್ಹತೆ:

SSLC, PUC, pass with yoga wellness Instructor Course Certificate by Yoga Certification Board OR Yoga training experience through reputed institute/ Organization

ಎಸ್ಎಸ್ಎಲ್ಸಿ, ಪಿಯುಸಿ ತೇರ್ಗಡೆಯಾಗಿದ್ದು, ಪ್ರತಿಷ್ಠಿತ ಸಂಸ್ಥೆಯಿಂದ ಯೋಗ ತರಬೇತಿ ಪಡೆದಿರುವ ಕುರಿತು ಅನುಭವ ಪ್ರಮಾಣ ಪತ್ರ ಹೊಂದರಬೇಕು.

ಫೆ. 24 2023 ರ ವರಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆಯುಷ್ ಕಛೇರಿಗೆ ಭೇಟಿ ನೀಡಬಹುದಾಗಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿಗಳಾದ ಶ್ರೀಕಾಂತ ಸುಣಧೋಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಖ್ಯ ಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಅರ್ಜಿ ಆಹ್ವಾನ

ಬೆಳಗಾವಿ: ಯರಗಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಗೆ ಒಳಪಡುವ ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ವರ್ಗದವರಿಗೆ ಹಾಗೂ ವಿಕಲಚೇತನರ ಫಲಾನುಭವಿಗಳ ಅಭಿವೃದ್ಧಿಗಾಗಿ ಮುಖ್ಯ ಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ ಹಂತ –4 ರ ಶೇ 24.10% , ಶೇ 7.25% ಮತ್ತು ಶೇ 5% ಅನುದಾನದಡಿ ವಿವಿಧ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ.ಜಾ/ಪ.ಪಂ ಜನಾಂಗದ ಶೇ 24.10% ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ, .ಪಕ್ಕಾ ಮನೆ ನಿರ್ಮಾಣಕ್ಕೆ, ಕಚ್ಚಾ ಮನೆ ಮೇಲ್ಛಾವಣಿ ದುರಸ್ತಿಗೆ, ಸಣ್ಣ ಉದ್ದಿಮೆ ಆರಂಭಿಸಲು ಬ್ಯಾಂಕ ಸಾಲಕ್ಕೆ, ಭಾರಿ ಶಸ್ತ್ರ ಚಿಕಿತ್ಸೆಗೆ ಸಹಾಯಧನ, ಎಮ್.ಬಿ.ಬಿ.ಎಸ್ /ಬಿ.ಇ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ಖರೀದಿಸಲು, ಕೌಶಲ್ಯ ಅಭಿವೃದ್ಧಿ ತರಬೇತಿ, ಹಾಗೂ ಮನೆಗಳಿಗೆ ಸೋಲಾರ ಲೈಟ ಸಂಪರ್ಕ ಪಡೆಯಲು, ಪ.ಪಂ ನಿವೇಶನ ಖರೀದಿಸಲು ಸಹಾಯಧನ ನೀಡಲಾಗುವುದು.

ಇತರೆ ಬಡಜನರ 7.25% ರ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ, ನಿವೇಶನ ಖರೀದಿಗೆ ಹಾಗೂ ಪಕ್ಕಾ ಮನೆ ನಿರ್ಮಾಣಕ್ಕೆ ಸಹಾಯಧನ ನೀಡಲಾಗುವುದು.

ವಿಕಲಚೇತನರ 5% ರ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ, ನಿವೇಶನ ಖರೀದಿಗೆ, ಪಕ್ಕಾ ಮನೆ ನಿರ್ಮಾಣಕ್ಕೆ, ಸಣ್ಣ ಉದ್ದಿಮೆ ಆರಂಭಿಸಲು ಬ್ಯಾಂಕ ಸಾಲಕ್ಕೆ ಹಾಗೂ ಜೀವ ವಿಮಾ ಕಂತು ಪಾವತಿಗೆ ಸಹಾಯಧನ ನೀಡಲಾಗುವುದು.

ಸದರಿ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಆಸಕ್ತಿಯುಳ್ಳ ಫಲಾನುಭವಿಗಳು ಫೆ.1 2023 ರಿಂದ ಫೆ.15 ರ ಸಂಜೆ 5 ಗಂಟೆ ಒಳಗಾಗಿ ನಿಗದಿತ ನಮೂನೆಯಲ್ಲಿ ಅವಶ್ಯಕ ದಾಖಲಾತಿಗಳೊಂದಿಗೆ ಈ ಕಾರ್ಯಾಲಯಕ್ಕೆ ತಮ್ಮ ಅರ್ಜಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಕಾರ್ಯಾಲಯಕ್ಕೆ ಭೇಟಿ ನೀಡಬಹುದಾಗಿದೆ. ಅಪೂರ್ಣವಾದ ಹಾಗೂ ಅವಧಿ ಮೀರಿ ಬಂದ ಹಾಗೂ ಅವಶ್ಯಕ ದಾಖಲಾತಿಗಳಿಲ್ಲದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಯರಗಟ್ಟಿ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದೂ–ಮುಸ್ಲಿಂ ಬೇಧ ಮಾಡುವವರನ್ನು ಮನೆಯಲ್ಲಿ ಕುಳ್ಳಿರಿಸಿ

ಗಂಗಾವತಿ: ಗಂಗಾವತಿ ನಗರ ಮತ್ತು ಕ್ಷೇತ್ರದಾದ್ಯಂತ ಕೆಲವರು ಹಿಂದೂ–ಮುಸ್ಲಿಂ ಬೇಧಭಾವ ಮಾಡುವ ಮೂಲಕ ರಾಜಕೀಯ ಬೇಳೆ ಬೇಯಿಸಿಕೊಂಡು ಗೆಲುವು ಪಡೆದು ಸ್ವಾರ್ಥ ಸಾಧಿಸುತ್ತಿದ್ದು ಕ್ಷೇತ್ರದ ಮತದಾರರು ಅಂತವರನ್ನು ಮನೆಯಲ್ಲಿ ಕುಳ್ಳಿರಿಸುವ ಮೂಲಕ ಎಲ್ಲರಿಗೂ ಆದ್ಯತೆ ನೀಡುವವರನ್ನು ಗೆಲ್ಲಿಸಿ ಸಮಗ್ರ ಅಭಿವೃದ್ಧಿಗೆ ನಾಂದಿ ಹಾಡುವಂತೆ ಕಲ್ಯಾಣ ರಾಜ್ಯ ಪ್ರಗತಿ ಪಾರ್ಟಿ ಸಂಸ್ಥಾಪಕ ಹಾಗೂ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಮನವಿ ಮಾಡಿದರು.

ಅವರು ನಗರದ ಸಂತೆಬಯಲು–ಮಹೆಬೂಬನಗರದಲ್ಲಿ ಕಾರ್ಯಕರ್ತರ ಬೃಹತ್ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿ, ನಾನು ಕೇವಲ ಅಧಿಕಾರದ ಆಸೆಗಾಗಿ ಪಕ್ಷ ಸ್ಥಾಪಿಸಿ ಚುನಾವಣೆಗೆ ಬಂದಿಲ್ಲ. 12 ವರ್ಷಗಳ ಕಾಲ ವನವಾಸ ಮುಗಿಸಿದ ನಂತರ ದೃಢ ಸಂಕಲ್ಪ ಮಾಡಿ ಜನರ ಸೇವೆಗಾಗಿ ನಾನು ರಾಜಕೀಯ–ಕ್ಕೆ ಬಂದಿದ್ದು. ಗಂಗಾವತಿ ಜನತೆಯ ನಡುವೆ ಮೊದಲಿಂದಲೂ ಯಾವುದೇ ರೀತಿಯ ವೈಮನಸ್ಸುಗಳು ಇರಲಿಲ್ಲ.ಇತ್ತೀಚೆಗೆ ಕೆಲ ಸ್ವಾರ್ಥ ರಾಜಕೀಯ ವ್ಯಕ್ತಿಗಳು ಜನತೆಯ ಮನಸ್ಸುಗಳನ್ನು ಒಡೆದಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ತಾವೆಲ್ಲರೂ ಒಟ್ಟಾಗಿ ನನ್ನ ಗೆಲುವಿಗೆ ಅಧಿಕಾರಕ್ಕೆ ಬಂದ ಮೊದಲ ತಿಂಗಳ ಕ್ಯಾಬಿನೆಟ್ ಮೀಟಿಂಗ್ ನಲ್ಲಿ ಎಲ್ಲಾ ಕೇಸ್ ಗಳನ್ನು ಹೊಡೆದು ಹಾಕಿ ನಮ್ಮಲ್ಲಿ ಮತ್ತೆ ಅನ್ಯೂನತೆ ಮೂಡಿಸುತ್ತೇನೆ. ಬಡವರ ಮನೆಗಳಿಗೆ ಹಕ್ಕುಪತ್ರದ ತೊಂದರೆ ಇದ್ದು ಎಲ್ಲಾರಿಗೂ ಮನೆಗಳ ಪಟ್ಟ ಸಮೇತ ಖಾತೆ, ಮುಟೇಷನ್ ಗಳನ್ನು ಕೊಡಿಸುವ ಕಾರ್ಯ ಮಾಡಲಾಗುತ್ತದೆ ಎಂದರು.



5 ಕೋಟಿ ರೂ. ವೆಚ್ಚದಲ್ಲಿ ನಗರದಲ್ಲಿ ಅಂತರರಾಷ್ಟ್ರೀಯ ಮಟ್ಟದ ಟೇಲರಿಂಗ್ ತರಬೇತಿ ಕೇಂದ್ರವನ್ನು ನಿರ್ಮಾಣ ಮಾಡಿ ಎಲ್ಲಾ ಮಹಿಳೆಯರು ಸ್ವಾಭಿಮಾನದ ದುಡಿದು ಅರ್ಥಿಕವಾಗಿ ಸಭಲರಾಗಿ ಗರ್ವದಿಂದ ಜೀವನ ಸಾಗಿಸಲು ವ್ಯವಸ್ಥೆ ಮಾಡಲಾಗುತ್ತದೆ. ನನ್ನನ್ನು ನಂಬಿ ಗೆಲ್ಲಿಸಿ ನಾನು ಇಡೀ ಉತ್ತರ ಕರ್ನಾಟಕದಲ್ಲಿ ಒಟ್ಟು 30–40 ಶಾಸಕರನ್ನು ಗೆಲ್ಲಿಸಿ ತಂದು ಇಡೀ ಸರ್ಕಾರ ನನ್ನ ಕ್ಷೇತ್ರಕ್ಕೆ ಬರುವಂತೆ ಮಾಡುತ್ತೇನೆ. ಇಲ್ಲಿ ಗೆದ್ದ ನಂತರ ನಾನು ಬಳ್ಳಾರಿ ಗೆ ಹೋಗುತ್ತೇನೆ ಎಂದು ಸುಳ್ಳು ಕಥೆ ಹೇಳುವವರನ್ನು ನಂಬದಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಳ್ಳಾರಿಯ ಮುಸ್ಲಿಂ ಧರ್ಮಗುರುಗಳು, ರೆಡ್ಡಿ ಅಪ್ತ ಮೆಹಬೂಬ್ ಅಲಿಖಾನ್ ಇದ್ದರು.

# ಕ್ಯಾನ್ಸರ್ ದಿನಾಚರಣೆ: ಜಾಥದ ಮೂಲಕ ಅರಿವು




ಕೊಪ್ಪಳ : ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಸಮುದಾಯ ವೈದ್ಯಶಾಸ್ತ್ರ ವಿಭಾಗ ವತಿಯಿಂದ ವಿಶ್ವ ಕ್ಯಾನ್ಸರ್ ದಿನಾಚರಣೆಯನ್ನು ಕೊಪ್ಪಳದ ನಗರ ಆರೋಗ್ಯ ಕೇಂದ್ರ ಹಾಗೂ ಇರಕಲ್ಲಗಡದ ಗ್ರಾಮೀಣ ಆರೋಗ್ಯ ತರಬೇತಿ ಕೇಂದ್ರದಲ್ಲಿ ಆಚರಿಸಲಾಯಿತು.

ವೈದ್ಯಕೀಯ ಮತ್ತು ಅರೆವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ನರ್ಸಿಂಗ್ ವಿದ್ಯಾರ್ಥಿಗಳು, ನಗರದ ಜಿಲ್ಲಾ ಬೋಧಕ ಆಸ್ಪತ್ರೆಯಿಂದ ಅಶೋಕ ವೃತ್ತದವರಗೆ ಜಾಥಾ ಕೈಗೊಂಡು ಘೋಷಣೆ ಕೂಗುತ್ತಾ ಸಾರ್ವಜನಿಕರಲ್ಲಿ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಿದರು.

ಇದೇ ವೇಳೆ ಕ್ಯಾನ್ಸರ್ದಿಂದ ಪುರುಷರಲ್ಲಿ ಕಂಡುಬರುವ ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್, ಅನ್ನನಾಳ ಕ್ಯಾನ್ಸರ್, ಜಠರ ಕ್ಯಾನ್ಸರ್ ಹಾಗೂ ಮಹಿಳೆಯರಲ್ಲಿ ಕಂಡುಬರುವ ಗರ್ಭಕೊರಳಿನ ಕ್ಯಾನ್ಸರ್, ಸ್ಥನ ಕ್ಯಾನ್ಸರ್, ಬಾಯಿ ಕ್ಯಾನ್ಸರ್, ಥೈರಾಯ್ಡ್ ಕ್ಯಾನ್ಸರ್‌ಗಳ ಲಕ್ಷಣ ಮತ್ತು ತಡೆಗಟ್ಟುವ ಕ್ರಮಗಳ ಬಗ್ಗೆ ಜಾಗೃತಿ ಜಾಥದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾದ ಡಾ ವಿಜಯನಾಥ ಇಟಗಿ, ಪ್ರಾಂಶುಪಾಲರಾದ ಡಾ ರಾಘವೇಂದ್ರ ಬಾಬು, ವೈದ್ಯಕೀಯ ಅಧೀಕ್ಷಕರಾದ ಡಾ ಕೆ.ವೇಣುಗೋಪಾಲ, ಸಮುದಾಯ ವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ ಮಲ್ಲಿಕಾರ್ಜುನ ಬಿರಾದಾರ, ಡಾ ಎಲ್.ಅನೀಲ್ ಕುಮಾರ ಇದ್ದರು.

ಸಮುದಾಯ ವೈದ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರು ಈ ಕಾರ್ಯಕ್ರಮದ ಉಸ್ತುವಾರಿಯನ್ನು ವಹಿಸಿದ್ದರು ಹಾಗೂ ವಿಭಾಗದ ಬೋಧಕ ಸಿಬ್ಬಂದಿಗಳಾದ ಡಾ ಹಂಚಿನಮನಿ ಗೀತಾ ಮತ್ತು ಡಾ ಬೆಂಗಾಲಿ ಅಶ್ವಿನಿ, ಮಹಿಳಾ ವೈದ್ಯಕೀಯ ಅಧಿಕಾರಿ, ಮತ್ತು ಸಮುದಾಯ ವೈದ್ಯಶಾಸ್ತ್ರ ವಿಭಾಗದ ಸ್ನಾತಕೋತ್ತರ ಪದವಿ ವಿದ್ಯಾರ್ಥಿ ಡಾ. ವಿನಾಯಕ ಮತ್ತು ಇತರ ಗೃಹ ವೈದ್ಯರಾದ ಮಲ್ಲಪ್ಪ ಬಿರಾದಾರ ಮತ್ತು ಸಂಗಪ್ಪ ಯಲ್ಲಟ್ಟನವರ್, ವೈದ್ಯಕೀಯ ಸಮಾಜಿಕ ಕಾರ್ಯಕರ್ತರು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಪೂರ್ವದಲ್ಲಿ ಸೂರ್ಯ ಹುಟ್ಟುವಷ್ಟೇ ಸತ್ಯ

ವಿಜಯಪುರ : ರಾಜ್ಯದಲ್ಲಿ ವಿಧಾನಸಭೆ ಚುನಾವಣೆಯಲ್ಲಿ 150 ಕ್ಕೂ ಹೆಚ್ಚು ಸ್ಥಾನ ಗೆದ್ದು ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಪೂರ್ವದಲ್ಲಿ ಸೂರ್ಯ ಹುಟ್ಟುವಷ್ಟೇ ಸತ್ಯ. ಅಧಿಕಾರಕ್ಕೆ ಬಂದ ಮೇಲೆ ರಾಜ್ಯದ ನೀರಾವರಿ ಯೋಜನೆಗಳಿಗೆ ಐದು ವರ್ಷದಲ್ಲಿ 2 ಲಕ್ಷ ಕೋಟಿ ರೂ. ಖರ್ಚು ಮಾಡಲಿದ್ದೇ ಎಂದು ವಿಧಾನಸಭೆ ವಿಪಕ್ಷ ನಾಯಕ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಶನಿವಾರ ಜಿಲ್ಲೆಯ ಇಂಡಿ ಪಟ್ಟಣದಲ್ಲಿ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 2013 ರ ಚುನಾವಣೆಯಲ್ಲಿ ನೀಡಿದ ಬಹುತೇಕ ಎಲ್ಲ ಭರವಸೆಗಳನ್ನು ನಾನು ಮುಖ್ಯಮಂತ್ರಿಯಾಗಿ ಈಡೇರಿಸಿದ್ದೇನೆ ಎಂದರು.

ಅಧಿಕಾರಕ್ಕೆ ಬಂದಮೇಲೆ: ಸಾಲ ಮನ್ನಾ ಮಾಡುವುದಾಗಿ ರಕ್ತದಲ್ಲಿ ಬರೆದು ಕೊಡುವುದಾಗಿ ಭರವಸೆ ನೀಡಿದ್ದ ಯಡಿಯೂರಪ್ಪ ಅಧಿಕಾರಕ್ಕೆ ಬಂದ ಮೇಲೆ ಮರೆತುಬಿಟ್ಟರು. ಆದರೆ ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ರೈತರ 8500 ಕೋಟಿ ರೂ. ಸಾಲ ಮನ್ನಾ ಮಾಡಿದ್ದೆ. ವಿಜಯಪುರ ಜಿಲ್ಲೆ ಒಂದರಲ್ಲೇ ರೈತರ 1300 ಕೋಟಿ ರೂ. ಸಾಲ ಮನ್ನಾ ಆಗಿರುವುದು ನಮ್ಮ ಸರ್ಕಾರದಲ್ಲಿ ಎಂದರು.

ಚೌಕಿದಾರನ ಬಿಜೆಪಿ ಪಕ್ಷದ ಕರ್ನಾಟಕ ಸರ್ಕಾರದ ಅವಧಿಯಲ್ಲಿ ವಿಧಾನಸೌಧ ಕಛೇರಿಗಳಲ್ಲಿ ಪ್ರತಿ ಕೆಲಸಕ್ಕೂ ಇಂತಿಷ್ಟು ಎಂದು ಲಂಚದ ಬೋರ್ಡ ಹಾಕಿದ್ದಾರೆ. ವಿಧಾನಸೌಧದ ಕಲ್ಲುಗಳು ಲಂಚ ಲಂಚ ಎಂದು ಕೂಗೂತ್ತಿವೆ ಎಂದು ವಾಗ್ದಾಳಿ ನಡೆಸಿದರು.



ರಾಜ್ಯದ ನೀರಾವರಿ 1 ಲಕ್ಷ 56 ಸಾವಿರ ಕೋಟಿ ರೂ. ಖರ್ಚು ಮಾಡುವ ಭರವಸೆ ನೀಡಿ, ಅಧಿಕಾರಕ್ಕೆ ಬಂದಮೇಲೆ ಬಿಜೆಪಿ ಈಡೇರಿಸದೇ ವಚನ ಭ್ರಷ್ಟತನ ಮಾಡಿತು. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಲೇ ರಾಜ್ಯದ ನೀರಾವರಿಗೆ 5 ವರ್ಷದಲ್ಲಿ 2 ಲಕ್ಷ ಕೋಟಿ ರೂ. ಖರ್ಚು ಮಾಡುತ್ತೇವೆ. ವಚನ ಪಾಲಿಸದಿದ್ದರೆ ಒಂದು ಕ್ಷಣವೂ ಅಧಿಕಾರದಲ್ಲಿ ಇರುವುದಿಲ್ಲ ಎಂದು ಸಿದ್ದರಾಮಯ್ಯ ಘೋಷಿಸಿದರು.

## ಫೆ. 25 ರವರೆಗೆ ಬೋಗಸ್ ಕಾರ್ಮಿಕ ಕಾರ್ಡ್ ನೋಂದಣಿ ರದ್ಧತಿ ಅಭಿಯಾನ

ಕೊಪ್ಪಳ: ಜಿಲ್ಲಾ ಕಾರ್ಮಿಕ ಇಲಾಖೆಯಿಂದ ನಕಲಿ ದಾಖಲಾತಿ ಸೃಷ್ಠಿಸಿ ಗುರುತಿನ ಚೀಟಿ ಪಡೆದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಲ್ಲದವರ ಕಾರ್ಡುಗಳನ್ನು ರದ್ದುಪಡಿಸಲು ಫೆಬ್ರವರಿ 25 ರವರೆಗೆ ಬೋಗಸ್ ಕಾರ್ಡ್ ನೋಂದಣಿ ರದ್ಧತಿ ಅಭಿಯಾನ ಕೈಗೊಳ್ಳಲಾಗಿದೆ.

ನಕಲಿ ದಾಖಲಾತಿ ಸೃಷ್ಠಿಸಿ ಗುರುತಿನ ಚೀಟಿ ಪಡೆದಿರುವ ಫಲಾನುಭವಿಗಳು ಸ್ವ–ಇಚ್ಛೆಯಿಂದ ಮಂಡಳಿಗೆ ಗುರುತಿನ ಚೀಟಿಯನ್ನು ಹಿಂತಿರುಗಿಸಿದಿದ್ದಲ್ಲಿ ಮುಂದಿನ ಕಾನೂನು ಕ್ರಮವನ್ನು ಕೈಬಿಡಲಾಗುವುದು ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ರವರು ಆದೇಶ ಹೊರಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪರಿಶೀಲನೆಗೆ ಒಳಗಾದ ಫಲಾನುಭವಿಯು ನಕಲು ದಾಖಲಾತಿಯನ್ನು ಸೃಷ್ಠಿಸಿ ನೋಂದಣಿಯಾಗಿರುವುದು ಕಂಡುಬಂದಲ್ಲಿ, ಸರ್ಕಾರದ ಅಧಿಸೂಚನೆ 2022ರ ಆಗಸ್ಟ್ 18ರ ತಿದ್ದುಪಡಿ ನಿಯಮ–20(7)ರನ್ವಯ ಕಾರ್ಮಿಕರ ನೋಂದಣಾಧಿಕಾರಿಯು ತನ್ನ ಅಧಿಕಾರವನ್ನು ಚಲಾಯಿಸಿ, ಸೇವಾಸಿಂಧು ತಂತ್ರಾಂಶದಲ್ಲಿ ಅಂತಹ ಫಲಾನುಭವಿಯ ನೋಂದಣಿಯನ್ನು 'ಫ್ರೀಜ್' ಮಾಡುವುದು ಮತ್ತು ಆ ಫಲಾನುಭವಿಯ ವೈಯಕ್ತಿಕ ಕಡತದಲ್ಲೂ ರದ್ಧತಿಯನ್ನು ದಾಖಲಿಸುವುದಾಗಿದೆ.

ಅಭಿಯಾನ ಸಂದರ್ಭದಲ್ಲಿ ಬೋಗಸ್ ಫಲಾನುಭವಿಯು ಸ್ವ–ಇಚ್ಛೆಯಿಂದ ನಕಲು ನೋಂದಣಿಯನ್ನು ಒಪ್ಪಿಕೊಂಡು ಗುರುತಿನ ಚೀಟಿಯನ್ನು ಹಿಂದಿರುಗಿಸದಿದ್ದಲ್ಲಿ, ಅವರಿಂದ ಒಪ್ಪಿಗೆ ಪತ್ರವನ್ನು ಪಡೆದು ಅವರ ಮೇಲಿನ ಮುಂದಿನ ಕಾನೂನು ಕ್ರಮವನ್ನು ಕೈಬಿಡುವುದು ಮತ್ತು ನೋಂದಣಿ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಫ್ರೀಜ್/ ರದ್ದು ಮಾಡುವುದು ಮತ್ತು ಕಡತದಲ್ಲಿ ರದ್ದುಗೊಳಿಸುವುದು ಹಾಗೂ ಈಗಾಗಲೇ ಪಡೆದಿರುವ ವಿವಿಧ ಸೌಲಭ್ಯಗಳನ್ನು ವಸೂಲಿ ಮಾಡಲು ಕ್ರಮಕೈಗೊಳ್ಳುವುದು.

ಅಭಿಯಾನದ ನಂತರವು ಸಂಬಂಧಪಟ್ಟ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರು ಅಥವಾ ನೋಂದಣಾಧಿಕಾರಿಯು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬೋಗಸ್ ಕಾರ್ಡುಗಳನ್ನು ಗುರುತಿಸಿ ರದ್ದುಗೊಳಿಸುವ ಕಾರ್ಯವನ್ನು ನಿರಂತರವಾಗಿ ನಿರ್ವಹಿಸುವರು.

ಈ ನಿಟ್ಟಿನಲ್ಲಿ ಫೆಬ್ರವರಿ 25 ರವರೆಗೆ ಬೋಗಸ್ ಕಾರ್ಡು ನೋಂದಣಿ ರದ್ಧತಿ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂತರಾಷ್ಟ್ರೀಯ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ: ಅರ್ಜಿಆಹ್ವಾನ

ಬೆಳಗಾವಿ: ಅಂತರರಾಷ್ಟ್ರೀಯ ಕ್ರೀಡಾ ಸ್ಪರ್ಧೆಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಕೇಂದ್ರ ಸರ್ಕಾರದಿಂದ ಪ್ರಸ್ತುತ ವರ್ಷದ ನಗದು ಪುರಸ್ಕಾರ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪದಕ ವಿಜೇತರಾದ ಅಂತರರಾಷ್ಟ್ರೀಯ ಕ್ರೀಡಾಪಟುಗಳು ದಿನಾಂಕ ಏಪ್ರಿಲ್ 30 2023ರ ಒಳಗಾಗಿ ಆನ್‌ಲೈನ್ ಪೋರ್ಟಲ್ https://dbtyas-sports.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 0831–2950306 ಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಯುವ ಸಬಲೀಕರಣ ಮತು ಕ್ರೀಡಾ ಇಲಾಖೆ ಉಪ ನಿರ್ದೇಶಕರಾದ ಜಿನೇಶ್ವರ ಪಡನಾಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ರೇಣುಕಾ ದೇವಿ ಅಂಗವಿಕಲ ವಿದ್ಯಾರ್ಥಿನಿಯರ ವಸತಿ ನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅನುದಾನದಡಿ ಬೆಳಗಾವಿ ನಗರದ ಡಾ. ಬಿ.ಆರ್.ಅಂಬೇಡ್ಕರ್ ಹರಿಜನ ಶಿಕ್ಷಣ ಸಂಸ್ಥೆಯ ವತಿಯಿಂದ ರುಕ್ಮಿಣಿ ನಗರದಲ್ಲಿರುವ ಜನತಾ ಕಾಲನಿ, ಮಾಳಮಾರುತಿ ಬಡಾವಣೆಯಲ್ಲಿ ಉದ್ಯೋಗಸ್ಥ ವಿಕಲಚೇತನ ವಿದ್ಯಾರ್ಥಿನಿಯರಿಗೆ ತರಬೇತಿ ನಿಡಲಾಗುವುದು.

ತರಬೇತಿ ಪಡೆಯುತ್ತಿರುವ ವಿಕಲಚೇತನ ವಿದ್ಯಾರ್ಥಿನಿಯರಿಗೆ ಉಚಿತ ವಸತಿ ನಿಲಯವನ್ನು ನೀಡಲಾಗುವುದು. ಸದರಿ ವಿಕಲಚೇತನ ಮಹಿಳೆಯರು ಮತ್ತು ವಿದ್ಯಾರ್ಥಿನಿಯರು ವಸತಿ ನಿಲಯಕ್ಕೆ ಪ್ರವೇಶವನ್ನು ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿ ದೂರವಾಣಿ ಸಂಖ್ಯೆ: 0831–2476096/7 ಹಾಗೂ ಸಂಸ್ಥೆಯ ಪದಾಧಿಕಾರಿಗಳ ಮೋಬೈಲ್ ಸಂಖ್ಯೆ: 9483317700 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ನಾಮದೇವ ಬಿಲ್ಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕಿನ 58 ಗ್ರಾಮಗಳಲ್ಲಿ ರಚನೆಯಾದ ಪದಾಧಿಕಾರಿಗಳ ಪದಗ್ರಹಣ

ತಾಳಿಕೋಟೆ: ತಾಲೂಕಿನ 58 ಗ್ರಾಮಗಳಲ್ಲಿ ಈಗಾಗಲೇ ರಚಿಸಲಾಗಿರುವ ಬೇಡ ಜಂಗಮ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಇದೇ ದಿ. 15 ರಂದು ನಾಡಿನ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ನಡೆಸಲು ತಿರ್ಮಾನಿಸಲಾಗಿದೆ ಎಂದು ಬೇಡ ಜಂಗಮ ಸಮಾಜದ ತಾಲೂಕಾ ಗೌರವಾಧ್ಯಕ್ಷ ಚಬನೂರಿನ ಜ್ಯೋತಿಷ್ಯ ರತ್ನ ಶ್ರೀ ರಾಮಲಿಂಗಯ್ಯ ಮಹಾ ಸ್ವಾಮಿಗಳು ಹೇಳಿದರು.

ಶನಿವಾರರಂದು ಪಟ್ಟಣದಲ್ಲಿಯ ಬೇಡ ಜಂಗಮ ಸಂಘದ ಕಾರ್ಯಾಲಯದಲ್ಲಿ ಸಮಾಜದ ಮುಖಂಡರ ಹಾಗೂ ಸಂಘದ ಕಾರ್ಯಕರ್ತರ ಉಪಸ್ಥಿತಿಯಲ್ಲಿ ಕರೆಯಲಾದ ಪೂರ್ವಭಾವಿ ಸಭೆಯಲ್ಲಿ ಮಾತನಾಡುತ್ತಿದ್ದ ಅವರು ತಾಳಿಕೋಟೆ ತಾಲೂಕಾ ಬೇಡ ಜಂಗಮ ಸಂಘದ ನೂತನ ಪದಾಧಿಕಾರಿಗಳನ್ನೊಳಗೊಂಡು ತಾಲೂಕಿನ 58 ಗ್ರಾಮಗಳಲ್ಲಿ ಶಾಖಾ ಸಂಘಟನೆಯನ್ನು ಮಾಡಿ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.



ಸಮಾಜದ ಸಂಘಟನೆ ಸಮಾಜದ ಒಳಿತಿಗಾಗಿ ಧ್ವನಿಯಾಗುವದರ ಜೊತೆಗೆ ಸಮಾಜದ ಬಡ ಜನರ ಏಳಿಗೆ ಬಯಸುವಂತಹದ್ದಾಗಿದೆ ಈಗಾಗಲೇ ನೇಮಕಗೊಂಡ ಎಲ್ಲ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಇದೇ ದಿ, 15 ಬುಧವಾರರಂದು ತಾಳಿಕೋಟೆಯ ಎಪಿಎಂಸಿ ಸಭಾಭವನದಲ್ಲಿ ಏರ್ಪಡಿಸಲು ಎಲ್ಲ ಶ್ರೀಗಳೊಂದಿಗೆ ಚರ್ಚಿಸಿ ನಿರ್ಧರಿಸಲಾಗಿದೆ ಅಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಈ ಸಮಾರಂಭದಲ್ಲಿ ತಾಲೂಕಿನ ಹಾಗೂ ಬೇರೆ ಬೇರೆ ತಾಲೂಕಿನ ಹರಗುರು ಚರಮೂರ್ತಿಗಳು ಭಾಗವಹಿಸಲಿದ್ದಾರೆಂದು ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ಹೇಳಿದರು.

ಬೇಡ ಜಂಗಮ ಸಂಘಟನೆಯ ಉದ್ದೇಶ ಸಮಾಜವು ಒಗ್ಗಟ್ಟಿನಿಂದ ಕೂಡಿರಬೇಕು ಒಗ್ಗಟ್ಟು ಎಂಬುದು ಶಕ್ತಿಯಾಗಿ ಪರಿವರ್ತನೆಯಾಗಲಿದೆ ಈ ಶಕ್ತಿ ಸಮಾಜದಲ್ಲಿನ ಬಡ ಬಗ್ಗರ ಜೀವನವನ್ನು ಮೇಲಕ್ಕೆ ಎತ್ತುವದರ ಜೊತೆಗೆ ಸರ್ಕಾರದಿಂದ ಅತ್ಯವಶ್ಯವಾಗಿರುವ ಬೇಡ ಜಂಗಮ ಮಿಸಲಾತಿ ಇರಬಹುದು ಇನ್ನಿತರ ಯಾವುದೇ ಕಾರ್ಯಕೆಲಸಗಳಿರಬಹುದು ಸರಳಿತವಾಗಿ ಮಾಡಿಕೊಳ್ಳಲು ಅನುಕೂಲವಾಗಲಿದೆ ಜಂಗಮ ಸಮಾಜದ ಜನರು ಸ್ವಾಭಿಮಾನಿಗಳಾಗಿದ್ದಾರೆ.

ಇನ್ನೂ ಎಲ್ಲ ಗ್ರಾಮಗಳಲ್ಲಿ ಮನೆ ಮನೆಗೆ ಜೋಳಿಗೆ ಯೊಂದಿಗೆ ಹೋಗಿ ಹಿಟ್ಟು ಇನ್ನಿತರ ನೀಡಿಸಿಕೊಳ್ಳುವಂತಹ ಸಂಪ್ರದಾಯ ಮುಂದುವರೆದಿದೆ ಇಂತಹ ಬಡ ಸಮಾಜಕ್ಕೆ ಮಿಸಲಾತಿ ಅವಶ್ಯವಾಗಿದ್ದು ಈ ನಿಟ್ಟಿನಲ್ಲಿ ಮೊದಲು ತಾಳಿಕೋಟೆ ತಾಲೂಕಿನಲ್ಲಿ ಬೇಡ ಜಂಗಮ ಸಂಘಟನೆಯನ್ನು ಬಲಿಷ್ಠವಾಗಿ ಕಟ್ಟುವ ನಿಟ್ಟಿನಲ್ಲಿ ಮಾಡಲಾಗಿದೆ ನಂತರ ದಿನಗಳಲ್ಲಿ ಬೇರೆ ಬೇರೆ ತಾಲೂಕುಗಳಲ್ಲಿ ಈ ಸಂಘಟನೆಯನ್ನು ಮಾಡುವ ವಿಚಾರ ಎಲ್ಲ ಹರ ಗುರು ಚರಮೂರ್ತಿಗಳದ್ದಾಗಿದೆ ಅಂದು ನಡೆಯಲಿರುವ ಈ ಪದಗ್ರಹಣ ಸಮಾರಂಭದಲ್ಲಿ ಜಂಗಮ ಸಮಾಜದ ಎಲ್ಲರೂ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ಹೇಳಿದರು.

ಈ ಸಮಯದಲ್ಲಿ ಬೇಡ ಜಂಗಮ ಸಮಾಜದ ಮುಖಂಡರುಗಳು, ಮಹಿಳಾ ಸಂಘಟನೆಯ ಪದಾಧಿಕಾರಿಗಳು ಭಾಗವಹಿಸಿದ್ದರು.

# ಬೇರು ಮಟ್ಟದಿಂದ ಪಕ್ಷ ಸಂಘಟಿಸಿ: ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ

## ಗೋಕಾಕ ವಿಧಾನಸಭಾ ಮತಕ್ಷೇತ್ರದ ಘಟಪ್ರಭಾದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆ




ಗೋಕಾಕ: 'ಬೇರುಮಟ್ಟದಿಂದ ಕೈ ಪಕ್ಷವನ್ನು ಬಲಪಡಿಸಿ ರಾಜ್ಯ ಮತ್ತು ರಾಷ್ಟ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದ ಚುಕ್ಕಾಣಿ ಹಿಡಿಯುವಂತೆ ಮಾಡಲು ಕಾರ್ಯಕರ್ತರು ಸಿದ್ಧರಾಗಬೇಕು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಕಾಂಗ್ರೆಸ್ ಕಾರ್ಯಕರ್ತರಿಗೆ ಕರೆ ನೀಡಿದರು.

ತಾಲೂಕಿನ ಘಟಪ್ರಭಾ ಪಟ್ಟಣದಲ್ಲಿ ನಡೆದ ಗೋಕಾಕ ವಿಧಾನಸಭಾ ಮತಕ್ಷೇತ್ರದ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮುಖಂಡರ ಕೊಡುಗೆ ಅಪಾರ, ಸಾಮಾಜಿಕ ನ್ಯಾಯ ಕೊಡುವವಲ್ಲಿ ಕಾಂಗ್ರೆಸ್ ಪಕ್ಷ ದ ಪಾತ್ರ ಮುಖ್ಯ ಎಂದ ಅವರು, ಇಂದಿನ ಅಗತ್ಯ ವಸ್ತುಗಳ ಬೆಲೆ ಏರಿಕೆ, ನಿರುದ್ಯೋಗ ಹೆಚ್ಚಳಕ್ಕೆ ಬಿಜೆಪಿಯೇ ಕಾರಣ. ಅಚ್ಛೇದಿನ್ ಬರುತ್ತೆ ಎಂದು ಹೇಳಿರುವ ಬಿಜೆಪಿಯವರು ಕಳೆದ 9 ವರ್ಷ ಗತಿಸಿದರೂ ಯಾವ ಅಚ್ಛೇದ್ದಿನ್ ಬರಲಿಲ್ಲ ಎಂದು ವ್ಯಂಗ್ಯವಾಡಿದರು.

'ಕಳೆದ ನಾಲ್ಕು ವರ್ಷದಿಂದ ರಾಜ್ಯದ ಜನರು ಸಾಕಷ್ಟು ತೊಂದರೆ ಅನುಭವಿಸಿದ್ದಾರೆ. ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಭ್ರಷ್ಟಾಚಾರದಲ್ಲಿ ಮುಳುಗಿ ಅಭಿವೃದ್ಧಿ ಹಿನ್ನಡೆ ಆಗಿದೆ. ನಮ್ಮ ಪಕ್ಷದ ಕಾರ್ಯಕರ್ತರು ಸೇರಿ ಜಾತಿ ಭೇದವಿಲ್ಲದೆ ಸಮಾಜ ಒಗ್ಗೂಡಿಸಿ ಪಕ್ಷ ಸಂಘಟಿಸಲು ಕಾರ್ಯಕರ್ತರು ಸಿದ್ದರಾಗಬೇಕು ಎಂದು ಹೇಳಿದರು.

ರಾಜಕೀಯದಲ್ಲಿ ಹೋರಾಟ ಮಾಡುವವರ ಸಂಖ್ಯೆ ಬಹಳ ಕಡಿಮೆ. ಕಾಂಗ್ರೆಸ್ ಮುಖಂಡ ಅಶೋಕ ಪೂಜಾರಿ ಹೋರಾಟ ಮಾಡುತ್ತ ರಾಜಕಾರಣ ಮಾಡುತ್ತಿದ್ದಾರೆ. ಗೋಕಾಕ್ ಕ್ಷೇತ್ರದಿಂದ ಸ್ಪರ್ಧಿಸಿ 4 ಬಾರಿ ಸೋತರೂ ಛಲ ಬಿಟ್ಟಿಲ್ಲ. ಅದ್ದರಿಂದ ಗೋಕಾಕ ಕ್ಷೇತ್ರದಲ್ಲಿ ಕಾಂಗ್ರೆಸ್ ಮುಖಂಡ ಅಶೋಕ ಪೂಜೇರ ಅವರಿಗೆ ಶಕ್ತಿ ತುಂಬಲು ಕೈ ಕಾರ್ಯಕರ್ತರು ಇಂದಿನಿಂದ ಸನ್ನದ್ಧರಾಗಬೇಕು ಎಂದು ಕರೆ ನೀಡಿದರು.

ಕಾಂಗ್ರೆಸ್ ಮುಖಂಡ ಅಶೋಕ ಪೂಜಾರಿ ಮಾತನಾಡಿ, ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರ ನೇತೃತ್ವದಲ್ಲಿ ಮುಂದಿನ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನಗಳು ಗೆಲ್ಲಲಿದ್ದೇವೆ. ಕಾಂಗ್ರೆಸ್ ಕಾರ್ಯಕರ್ತರು ಅಭಿವೃದ್ಧಿ ಹಾಗೂ ಪಕ್ಷ ದ ತತ್ವ ಸಿದ್ಧಾಂತಗಳನ್ನು ಜನರಿಗೆ ಮುಟ್ಟಿಸುವ ಮೂಲಕ ಬೂತ ಮಟ್ಟದಿಂದ ಪಕ್ಷ ಸಂಗಟಿಸಲು ಕಾರ್ಯಕರ್ತರು ಸಿದ್ದರಾಗಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಈ ವೇಳೆ ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಘಟಕದ ಜಿಲ್ಲಾ ಅಧ್ಯಕ್ಷೆ ಕಲ್ಪನಾ ಜೋಷಿ, ಗ್ರಾಮೀಣ ಅಧ್ಯಕ್ಷ ಪ್ರಕಾಶ ಡಾಂಗೆ, ನಗರ ಅಧ್ಯಕ್ಷ ಜಾಕೀರ್ ನದಾಫ್, ಹಿರಿಯ ಕಾಂಗ್ರೆಸ್ ಮುಖಂಡ ಸಿದ್ದಲಿಂಗ ದಳವಾಯಿ, ಕೆಪಿಸಿಸಿ ಸದಸ್ಯೆ ಪ್ರೇಮಾ ಚಿಕ್ಕೋಡಿ, ಕಾಂಗ್ರೆಸ್ ಮುಖಂಡ ಶಂಕರ ಗಿಡನವರ, ಕೆಪಿಸಿಸಿ ಅಲ್ಪ ಸಂಖ್ಯಾತರ ಘಟಕದ ರಾಜ್ಯ ಪ್ರದಾನ ಕಾರ್ಯದರ್ಶಿಇಮ್ರಾನ ತಪಕಿರ, ಅಲ್ಪ ಸಂಖ್ಯಾತ ಗ್ರಾಮೀಣ ಅಧ್ಯಕ್ಷ ರೆಹಮಾನ್ ಮೋಕಾಶಿ, ಪ್ರಕಾಶ ಕೋಲಾರ್ ಶಂಕರ ಹುರಕಡ್ಲಿ, ಯಲ್ಲಪ್ಪ ನಂದಿ, ರಾಹುಲ್ ಬಡೆಸಗೋಳ, ಬಸವರಾಜ ಹೊಳೆಯಾಚೆ, ಹನುಮಂತ ಗೋಪಾಳಿ,ಯಲ್ಲಪ್ಪ ನಂದಿ, ಎಂ.ಕೆ. ಪೂಜೇರ, ನಜೀರ್ ಶೇಖ್ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

## ಸಿದ್ದರಾಮಯ್ಯಗೆ ಕೂಡಿಟ್ಟ 5 ಸಾವಿರ ರೂ. ನೀಡಿದ 5ನೇ ತರಗತಿ ವಿದ್ಯಾರ್ಥಿನಿ



ವಿಜಯಪುರ: ಜಿಲ್ಲೆಯ ಸಿಂಧಗಿ ಪಟ್ಟಣದ 5ನೇ ತರಗತಿ ವಿದ್ಯಾರ್ಥಿನಿ ಕುಮಾರಿ ಜಿಯಾ ತಾನು ಕೂಡಿ-ಟ್ಟ ಹಣವನ್ನು ವಿಪಕ್ಷ ನಾಯಕ ಸಿದ್ದರಾಮಯ್ಯ ಅವರ ಚುನಾವಣಾ ಗೆಲುವಿಗಾಗಿ ನೀಡಿದ್ದಾಳೆ.

ತನಗೆ ಪಾಕೆಟ್ ಮನಿ ರೂಪದಲ್ಲಿ ನೀಡಿದ್ದ ಹಣವನ್ನು ಕುಮಾರಿ ಜಿಯಾ ಕೂಡಿಟ್ಟಿದ್ದಳು. ಹೀಗೆ ಕೂಡಿಟ್ಟ 5 ಸಾವಿರ ರೂ. ಹಣವನ್ನು ಇಂದು ವಿಜಯಪುರದಲ್ಲಿ ನಡೆದ ಪ್ರಜಾಧ್ವನಿ ಸಮಾವೇಶದ ವೇದಿಕೆಯಲ್ಲಿ ಕುದ್ದಾಗಿ ಚುನಾವಣಾ ಗೆಲುವಿಗಾಗಿ ಸಿದ್ದರಾಮಯ್ಯ ಅವರಿಗೆ ನೀಡಿದ್ದಾಳೆ.

## ದೈಹಿಕ ಪರೀಕ್ಷೆ ಪಾಸಾಗಲು ಕಾಲಿಗೆ ಗೋದಿ ಹಿಟ್ಟು ಮೆತ್ತಿಕೊಂಡ ಯುವಕ



ಕಲಬುರಗಿ: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಚಾಲಕ ಕಂ ನಿರ್ವಾಹಕ ಹುದ್ದೆಗಳ ನೇಮಕಾತಿ ವೇಳ ದೈಹಿಕ ಪರೀಕ್ಷೆಯಲ್ಲಿ ಉತ್ತೀರ್ಣವಾಗಲು ಕಾಲಿಗೆ ಗೋದಿ ಹಿಟ್ಟು ಮೆತ್ತಿಕೊಂಡು ಪರೀಕ್ಷೆಗೆ ಹಾಜರಾಗಿ ಸಿಕ್ಕಿಬಿದ್ದಿರುವ ಘಟನೆ ಶನಿವಾರ ಬೆಳಗ್ಗೆ ನಡೆದಿದೆ.

ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ 1619 ಚಾಲಕ ಕಂ ನಿರ್ವಾಹಕ ಹುದ್ದೆಗಳ ನೇಮಕಾತಿಗೆ 38 ಸಾವಿರ ಅಭ್ಯರ್ಥಿಗಳು ಅರ್ಜಿ ಹಾಕಿದ್ದಾರೆ. ಮೊದಲ ಹಂತದ ದೇಹದಾರ್ಢ್ಯ ಪರೀಕ್ಷೆ ನಡೆಸಲಾಗುತ್ತಿದೆ. ಚಾಲಕ ಕಂ ನಿರ್ವಾಹಕನಾಗಲು 55 ಕೆಜಿ ತೂಕ, 163 ಸೆಂಟಿ ಮೀಟರ್ ಎತ್ತರವಿರಬೇಕು.

ಆದ್ರೆ, ಟೆಸ್ಟ್ಗೆ ಬಂದಿದ್ದ ನಾಲ್ವರು ಖದೀಮರು ತೂಕ ಹೆಚ್ಚಳಕ್ಕಾಗಿ ಒಳ ಉಡುಪಲ್ಲಿ ಕೆಜಿ ಕಲ್ಲು, ಕಾಲುಗಳಿಗೆ, ಸೊಂಟಕ್ಕೆ ಕಬ್ಬಿಣದ ಪೀಸ್ಗಳನ್ನು ಕಟ್ಟಿಕೊಂಡಿದ್ದರು. ಓರ್ವ ಅಭ್ಯರ್ಥಿ ತನ್ನ ತೊಡೆಗೆ ಗೋದಿ ಹಿಟ್ಟನ್ನು ಮೆತ್ತಿಕೊಂಡು ಬಂದಿದ್ದಾನೆ. ಇಲಾಖೆಯ ಸಿಬ್ಬಂದಿ ಪರಿಶೀಲನೆ ವೇಳೆ ಅಭ್ಯರ್ಥಿ ಕಳ್ಳಾಟ ಬಯಲಾಗಿದೆ. ಸದ್ಯ ಅಭ್ಯರ್ಥಿಯನ್ನು ನೇಮಕಾತಿ ಪ್ರಕ್ರಿಯೆಯಿಂದಲೇ ಕೈಬಿಡಲಾಗಿದೆ. ಮಾನವೀಯತೆ ದೃಷ್ಟಿಯಿಂದ ಕೇಸ್ ದಾಖಲಿಸದೆ ಬಿಟ್ಟು ಕಳಿಸಲಾಗಿದೆ.

## ಪ್ರೀತಿಯ ಸೆಲಬ್ರಿಟಿಗಳಿಗೆ ವಿಶೇಷ ಉಡುಗೊರೆ ಕೊಟ್ಟ ದರ್ಶನ್



ಬೆಂಗಳೂರು: ಸಿನಿಮಾ ನಟನಿಗಾಗಿ ಆತನ ಅಭಿಮಾನಿಗಳು ತಮ್ಮ ಕೈ ಮೇಲೆ, ಎದೆ ಮೇಲೆ ಟ್ಯಾಟು ಹಾಕಿಸಿಕೊಂಡು ತಮ್ಮ ಅಭಿಮಾನವನ್ನು ತೋರಿಸಿಕೊಳ್ಳುವುದು ಕಾಮನ್. ಆದರೆ ತನ್ನ ಅಭಿಮಾನಿಗಳಿಗಾಗಿ ನಟನೋರ್ವ ಟ್ಯಾಟು ಹಾಕಿಸಿಕೊಳ್ಳುವುದು ಅತಿ ಅಪರೂಪ.

ಅದರಲ್ಲೂ ಸ್ಟಾರ್ ನಟರು ತಮ್ಮ ಅಭಿಮಾನಿಗಳ ಹೆಸರನ್ನು ಎದೆ ಮೇಲೆ ಟ್ಯಾಟು ಹಾಕಿಸಿಕೊಳ್ಳುವುದು ತೀರಾ ಕಷ್ಟ.

ಆದರೆ ನಟ ಚಾಲೆಂಜಿಂಗ್ ಸ್ಟಾರ್ ದರ್ಶನ್ ತಮ್ಮ ಎದೆ ಮೇಲೆ 'ನನ್ನ ಸೆಲೆಬ್ರಿಟೀಸ್' ಎಂದು ಟ್ಯಾಟು ಹಾಕಿಸಿಕೊಳ್ಳುವ ಮೂಲಕ ಅಭಿಮಾನಿಗಳಿಗೆ ಟ್ರಿಬ್ಯೂಟ್ ಸಲ್ಲಿಸಿದ್ದಾರೆ. ದರ್ಶನ್ ತಮ್ಮ ಎದೆ ಮೇಲೆ ಈ ರೀತಿಯ ಟ್ಯಾಟು ಹಾಕಿಸಿಕೊಂಡು ಫೋಟೊಗೆ ಪೋಸ್ ಕೊಟ್ಟಿದ್ದಾರೆ.

ಬಹುಶಃ ಚಿತ್ರೋದ್ಯಮದ ಇತಿಹಾಸದಲ್ಲಿ ಅಭಿಮಾನಿಗಳ ಪ್ರೀತಿಯನ್ನು ಹಚ್ಚೆಯ ಮೂಲಕ ಎದೆಗೆ ಇಳಿಸಿಕೊಂಡ ನಟ ದರ್ಶನ್ ಮೊದಲಿಗರು ಇರಬಹುದೆನೋ! ಈ ಮೂಲಕ ಹೊಸ ಬದಲಾವಣೆಗೆ ದರ್ಶನ್ ನಾಂದಿ ಹಾಡಿದ್ದಾರೆ.

ತಾವು ಟ್ಯಾಟು ಹಾಕಿಸಿಕೊಳ್ಳುತ್ತಿರುವ ವಿಡಿಯೊವನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡ ದರ್ಶನ್ ಅಭಿಮಾನಿಗಳಿಗೆ ಬಿಗ್ ಸರ್‌ಪ್ರೈಸ್ ನೀಡಿದ್ದಾರೆ.

ನಟ ದರ್ಶನ್ ತಮಗಾಗಿ ಹಾಕಿಸಿಕೊಂಡಿರುವ ಟ್ಯಾಟು ಕಂಡ ಅಭಿಮಾನಿಗಳು ಫುಲ್ ಖುಷ್ ಆಗಿದ್ದಾರೆ.

ನಿಮ್ಮ ಅಭಿಮಾನಿಯಾಗಿದ್ದಕ್ಕೂ ಸಾರ್ಥಕವಾಯಿತು ಎಂದು ಸಾಮಾಜಿಕ ಜಾಲತಾಣದಲ್ಲಿ ಕಾಮೆಂಟ್ ಮಾಡಿ ಹರ್ಷ ವ್ಯಕ್ತಪಡಿಸುತ್ತಿದ್ದಾರೆ. ನಮ್ಮ ಪಾಲಿಗೆ ನೀವು ದೇವ್ರಿಗಿಂತ ಹೆಚ್ಚಾದ್ರಿ ಎಂದು ಅಭಿಮಾನಿಗಳು ಕಮೆಂಟ್ ಮಾಡಿದ್ದಾರೆ.

## ರೈಲಿಗೆ ತಲೆಕೊಟ್ಟು ಪೊಲೀಸ್ ಇನ್ಸ್ಪೆಕ್ಟರ್ ಆತ್ಮಹತ್ಯೆ

ಬೆಂಗಳೂರು: ಆದಾಯ ತೆರಿಗೆ ಇಲಾಖೆಯ ಇನ್ಸ್ಪೆಕ್ಟರ್ ದೇವೆಂದ್ರ ದುಬೆ ಅವರು ರೈಲ್ವೆ ಹಳಿಗೆ ತಲೆಕೊಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಬಿಡಿಎ ಸಮೀಪ ನಡೆದಿದೆ.

ಉತ್ತರ ಪ್ರದೇಶ ಮೂಲದವರಾದ ದೇವೆಂದ್ರ ದುಬೆ, 10 ವರ್ಷಗಳಿಂದ ಬೆಂಗಳೂರಲ್ಲಿಯೇ ನೆಲೆಸಿದ್ದರು. ನಗರದ ಆದಾಯ ತೆರಿಗೆ ಇಲಾಖೆಯಲ್ಲಿ ಇನ್ಸ್ಪೆಕ್ಟರ್ ಆಗಿ ಕಾರ್ಯನಿರ್ವಹಿಸುತ್ತಿದ್ದರು. ಸಾಯುವ ಮುನ್ನಾ ದುಬೆ ಉತ್ತರ ಪ್ರದೇಶದಲ್ಲಿ ನೆಲೆಸಿರುವ ತನ್ನ ತಂದೆ-ತಾಯಿ ಜೊತೆ ಕೊನೆಯದಾಗಿ ಫೋನ್ನಲ್ಲಿ ಮಾತನಾಡಿದ್ದರು. ಹಾಗೇ ಪತ್ನಿ ಆರತಿ ಮಾಳವಿಯಗೆ ಸಂಜೆ ಮನೆಗೆ ಬರುವುದಾಗಿ ಫೋನ್ನಲ್ಲಿ ಹೇಳಿದ್ದರು ಎನ್ನಲಾಗಿದೆ.

ಆದರೆ ನಂತರ ಪತ್ನಿಗೆ ಮೊಬೈಲ್ನಲ್ಲಿ ವಾಟ್ಸ್ ಆಯಪ್ ಮೂಲಕ ಇನ್ಶೂರೆನ್ಸ್ ಪಾಲಿಸಿ ಹಾಗೂ ಡೆತ್ ನೋಟ್ ಅನ್ನು ಸೆಂಡ್ ಮಾಡಿದ್ದರು. ನನ್ನ ಸಾವಿಗೆ ನಾನೇ ಕಾರಣ ಅಂತ ಡೆತ್ನೋಟ್ ಬರೆದು ಪತ್ನಿಗೆ ಕಳಿಸಿದ ಬಳಿಕ ಬಿಡಿಎ ಬಳಿಯ ರೈಲ್ವೆ ಹಳಿಗೆ ತಲೆಕೊಟ್ಟು ಸಾವಿಗೆ ಶರಣಾಗಿದ್ದಾರೆ. ಈ ಬಗ್ಗೆ ಪತ್ನಿ ಆರತಿ ಮಾಳವಿಯ ಗಂಡನ ನಾಪತ್ತೆ ಬಗ್ಗೆ ಯಶವಂತಪುರ ಠಾಣೆಗೆ ದೂರು ನೀಡಿದ್ದರು. ಬೆಂಗಳೂರು ರೈಲ್ವೆ ಪೊಲೀಸರಿಂದ ದುಬೆ ಸಾವಿನ ಬಗ್ಗೆ ತನಿಖೆ ಮಾಡುತ್ತಿದ್ದಾರೆ.

## ಭೀಕರ ಅಪಘಾತ: ನವ ದಂಪತಿ ಸ್ಥಳದಲ್ಲೇ ದುರ್ಮರಣ



ತುಮಕೂರು: ಕಾರು-ಲಾರಿ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ನವ ದಂಪತಿಗಳು ಸಾವನ್ನಪ್ಪಿರುವ ಘಟನೆ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲೂಕಿನ ಹುಳಿಯಾರ್ ಗೇಟ್ ಬಳಿ ನಡೆದಿದೆ.

ಹಾಸನ ಜಿಲ್ಲೆಯ ಅರಸಿಕೆರೆ ಮೂಲದ ರಘು (35) ಹಾಗೂ ಅನುಷಾ (28) ಮೃತ ದಂಪತಿಗಳು. ಒಂದುವರೆ ತಿಂಗಳ ಹಿಂದಷ್ಟೇ ವಿವಾಹವಾಗಿದ್ದ ರಘು ಹಾಗೂ ಅನುಷಾ ಬೆಂಗಳೂರಿನಲ್ಲಿ ಸಾಫ್ಟ್ ವೇರ್ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿದ್ದರು.

ಸಂಬಂಧಿಕರ ಮನೆಯ ಮದುವೆಗೆಂದು ತೆರಳುತ್ತಿದ್ದಾಗ ಹುಳಿಯಾರ್ ಗೇಟ್ ಬಳಿ ಕಾರು ಹಾಗೂ ಲಾರಿ ನಡುವೆ ಅಪಘಾತ ಸಂಭವಿಸಿದೆ. ಕಾರು ಸಂಪೂರ್ಣ ನುಜ್ಜುಗುಜ್ಜಾಗಿದ್ದು, ದಂಪತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅಪಘಾತದ ರಭಸಕ್ಕೆ ಲಾರಿ ರಸ್ತೆ ಬದಿಯ ಮರಕ್ಕೆ ಹೋಗಿ ಡಿಕ್ಕಿ ಹೊಡೆದಿದೆ.

## ನಿರಾಣಿ ಬೆಂಬಲಿಗರಿಂದ ಮುಂದುವರಿದ ಸಕ್ಕರೆ ರಾಜಕೀಯ



ಬಾಗಲಕೋಟೆ: ಸಚಿವ ಮುರಗೇಶ್ ನಿರಾಣಿ ಬೆಂಬಲಿಗರಿಂದ ಸಕ್ಕ-ರೆ ಗಿಫ್ಟ್ ಪಾಲಿಟಿಕ್ಸ್ ಮುಂದುವರಿದಿದೆ. ಮಹಿಳೆ ಸಕ್ಕರೆ ವಾಪಸ್ ಮಾಡಿದ ಸುದ್ದಿಯ ಬೆನ್ನಲ್ಲೇ ಇದೀಗ ಸಾಮಾಜಿಕ ಜಾಲತಾಣದಲ್ಲಿ ಮತ್ತೊಂದು ವೀಡಿಯೋ ವೈರಲ್ ಆಗಿದೆ.

ಹೌದು. ಬೀಳಗಿ ವಿಧಾನಸಭಾ ಕ್ಷೇತ್ರದ ಉದಗಟ್ಟಿ ಗ್ರಾಮದಲ್ಲಿ ರಾತ್ರಿ ಹೊತ್ತು ಸಕ್ಕರೆ ಪ್ಯಾಕೆಟ್ ಹಂಚುತ್ತಿರುವ ವೀಡಿಯೋ ವೈರಲ್ ಆಗಿದೆ. ಸಚಿವರ ಬೆಂಬಲಿಗರು ಮನೆಮನೆಗಳಿಗೆ ತೆರಳಿ ಸಕ್ಕರೆ ಪ್ಯಾ-ಕೆಟ್ ವಿತರಿಸುತ್ತಿರುವುದು ಬಯಲಾಗಿದೆ. ಸದ್ಯ ಗಿಫ್ಟ್ ಪಾಲಿಟಿಕ್ಸ್ ಗೆ ಸಾರ್ವಜನಿಕ ವಲಯದಲ್ಲಿ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಭಾರೀ ಆಕ್ರೋಶ ವ್ಯಕ್ತವಾಗುತ್ತಿದೆ.

ಏನಿದು ಘಟನೆ..?: ಕೆಲ ದಿನಗಳ ಹಿಂದೆ ಗಲಗಲಿ ಗ್ರಾಮದಲ್ಲಿ ಸಕ್ಕರೆ ಪ್ಯಾಕೆಟ್ ಹಂಚಿಕೆ ವೇಳೆ ಮಹಿಳೆಯೊಬ್ಬರು ಸಕ್ಕರೆಯನ್ನ ತಿರಸ್ಕರಿಸಿದ್ದರು. ಈ ಘಟನೆ ಬೆನ್ನಲ್ಲೇ ಮತ್ತೆ ಸಕ್ಕರೆ ಹಂಚಿಕೆ ಮುಂದುವರಿದಿದೆ. ಬೀಳಗಿ ತಾಲೂಕಿನ ಬಾಡಗಂಡಿ ಗ್ರಾಮದಲ್ಲಿ ಮತ್ತೊಬ್ಬರು ಸಕ್ಕರೆ ಪ್ಯಾಕೆಟ್ ತಿರಸ್ಕರಿಸಿದ್ದಾರೆ. ಶುಕ್ರವಾರ ರಾತ್ರಿ ನಾರಾಯಣ ಉಪ್ಪಾರ ಮನೆ ಹೊರಗಡೆ ನಿರಾಣಿ ಬೆಂಬಲಿಗರು ಸಕ್ಕರೆ ಪ್ಯಾಕೆಟ್ ಇಟ್ಟು ಹೋಗಿದ್ದಾರೆ.

ಉಪ್ಪಾರ ಅವರು ತಡರಾತ್ರಿ ಎದ್ದು ಬಂದು ಹೊರಗಡೆ ನೋಡಿ-ದಾಗ ಸಕ್ಕರೆ ಪ್ಯಾಕೆಟ್ ಇರುವುದು ಬೆಳಕಿಗೆ ಬಂದಿದೆ. ನಾವು ಮನೆಯಲ್ಲಿ ಇಲ್ಲದ ವೇಳೆ ಯಾರೋ ಬಂದು ಇಟ್ಟಿದ್ದಾರೆ ನಮಗೆ ಸಕ್ಕರೆ ಬೇಕಾಗಿಲ್ಲ. ಪ್ರತಿ ತಿಂಗಳು ಕೊಡಬೇಕಾಗಿತ್ತಲ್ಲ. ಈಗ ಬಂದ ಯಾಕೆ ಸಕ್ಕರೆ ಕೊಡುತ್ತಿದ್ದಾರೆ. ನಮಗೆ ನಿರಾಣಿಯವರ ಐದು ಕೆಜಿ ಸಕ್ಕರೆ ಬೇಕಾಗಿಲ್ಲ ಎಂದು ಕಿಡಿಕಾರಿದ್ದಾರೆ.



ಬಳ್ಳಾರಿ : ಬಳ್ಳಾರಿ ನಗರದ 17ನೇ ವಾರ್ಡಿನ ಹನುಮಾನ್ ನಗರದ ಆಂಜನೇಯ ದೇವಸ್ಥಾನದ ಬಳಿ ಸಿಸಿ ರಸ್ತೆ ಕಾಮಗಾರಿಗೆ ನಗರ ಶಾಸಕ ಜಿ.ಸೋಮಶೇಖರ ರೆಡ್ಡಿ ಚಾಲನೆ ನೀಡಿದರು. ಪಾಲಿಕೆ ಸದಸ್ಯೆ ಕವಿತಾಹೊನ್ನಪ್ಪ ಮೊದಲಾದವರು ಇದ್ದರು.

## ಸ್ವಾರ್ಥತೊರೆದಾಗ ಉನ್ನತಿ ಸಾಧ್ಯ: ಪ್ರೊ. ತಳವಾರ ಸಾಬಣ್ಣ




ಬೆಳಗಾವಿ: ಸರ್ಕಾರ, ಸಮಾಜ ಮತ್ತು ದೇಶದ ಯೋಜನೆಗಳ ಮೇಲೆ ಪ್ರತಿಯೊಬ್ಬರು ಅವಲಂಬಿತರಾದರೆ, ದೇಶ ಪ್ರಗತಿ ಹೊಂದುವುದು ಕಷ್ಟ. ಹಾಗಾಗೀ ದೇಶ ಮತ್ತುತನಗೆ ಏನು ನೀಡುತ್ತಿದೆ ಎಂಬ ಸ್ವಾರ್ಥ ಚಿಂತನೆಯನ್ನು ತೊರೆಯುವುದು ಮುಖ್ಯ. ದೇಶ ಮತ್ತು ಸಮಾಜದ ಪ್ರಗತಿಗೆತಮ್ಮ ಸರ್ವಸ್ವವನ್ನು ಧಾರೆಯೆರೆಯುವ ಮೂಲಕ ಸಮಾಜದ ಉನ್ನತಿಗೆ ಶ್ರಮಿಸುವ ಅವಶ್ಯಕತೆಯಿದೆ ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ತಳವಾರ ಸಾಬಣ್ಣ ಹೇಳಿದರು.

ರಾಣಿಚನ್ನಮ್ಮ ವಿಶ್ವವಿದ್ಯಾಲಯದ ಕುವೆಂಪು ಸಭಾಭವನದಲ್ಲಿ ಪಂಡಿತ ದೀನದಯಾಳ ಉಪಾಧ್ಯಾಯ ಅಧ್ಯಯನ ಪೀಠದ ನೇತೃತ್ವದಲ್ಲಿ ಶನಿವಾರ ಜರುಗಿದ ಪಂಡಿತ ದೀನದಯಾಳ ಉಪಾಧ್ಯಾಯರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾಮಾಜಿಕ ಮತ್ತು ಆರ್ಥಿಕವಾಗಿ ಸಬಲ ಹೊಂದಿದವರು, ದುರ್ಬಲ ಜನಾಂಗದ ಉನ್ನತಿಗೆ ತ್ಯಾಗ ಮಾಡುವ ಅವಶ್ಯಕತೆಯಿದೆ. ಮೇಲ್ವರ್ಗವು ಮತ್ತು ಕೇಳವರ್ಗ ಎಂಬ ದೊಡ್ಡಕಂದಕ ಸಮಾಜದಲ್ಲಿ ಉಂಟಾಗಿದೆ. ಈ ಕಂದಕ ತೊಡೆದು ಹಾಕಲು ಮೇಲ್ವರ್ಗದ ಸಮುದಾಯಜನರು ಕೇಳವರ್ಗದ ಜನರ ಏಳ್ಗೆಗಾಗಿ ಶ್ರಮಿಸುವ ಅಗತ್ಯತೆಯಿದೆ. ಪಂಡಿತ ದೀನದಯಾಳ ಅಶಯದಂತೆ ಸಮಾಜದಕೊನೆಯ ವ್ಯಕ್ತಿಗೂ ಸರ್ಕಾರದಎಲ್ಲ ಯೋಜನೆಗಳನ್ನು ಲಭಿಸಿ, ಆತಉನ್ನತಿ ಹೊಂದಿದಾಗ ಮಾತ್ರರಾಷ್ಟ್ರ ಪ್ರಗತಿಯಾಗುವುದು ಎಂದರು.

ಅರ್ಥಶಾಸ್ತ್ರ, ರಾಜಕೀಯ ಮತ್ತು ಸಾಮಾಜಿಕ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪಂಡಿತ ದೀನದಯಾಳ ಉಪಾಧ್ಯಾಯ ಅವರ ಕೊಡುಗೆ ಅನನ್ಯವಾಗಿದೆ. ಗ್ರಾಮೀಣ, ದುರ್ಬಲ ಮತ್ತು ಶೋಷಿತರ ಉನ್ನತಿಯಿಂದ ಮಾತ್ರ ಭಾರತ ಬಲಿಷ್ಠವಾಗುವುದು ಎಂಬ ಸ್ಪಷ್ಟಕಲ್ಪನೆ ಅವರು ಹೊಂದಿದ್ದರು. ಆದ್ದ-ರಿಂದ ಪಂಡಿತ ದೀನದಯಾಳರ ಆದರ್ಶ ಚಿಂತನೆ ಮತ್ತು ಕಾರ್ಯಗಳನ್ನು ನಾವು ಮುಂದುವರೆಸಿ ಕೊಂಡು ಹೋಗಬೇಕಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ರಾಮಚಂದ್ರಗೌಡ ಮಾತನಾಡಿ, ಪಂಡಿತ ದೀನದಯಾಳ ಉಪಾಧ್ಯಾಯ ಅಧ್ಯಯನ ಪೀಠವು ಕಳೆದೆರೆಡು ವರ್ಷದಲ್ಲಿ ಸಮಾಜಮುಖಿ ಕಾರ್ಯದಲ್ಲಿ ತೊಡಗಿದೆ. ಕೋವಿಡ್ ಲಾಕ್‌ಡೌನ ಸಮಯದಲ್ಲಿ 2 ಗ್ರಾಮಗಳನ್ನು ದತ್ತು ಪಡೆದು, ಅಲ್ಲಿಆಹಾರಕಿಟ್ ವಿತರಣೆ ಮಾಡಲಾಯಿತು. ಆ ಗ್ರಾಮದಲ್ಲಿ ಸಂಜೆ ಶಾಲಾ ಮಕ್ಕಳಿಗೆ ಮನೆ ಪಾಠದ ವ್ಯವಸ್ಥೆಕಲ್ಪಿಸಲಾಯಿತು. ಹೀಗೆ ಅನೇಕ ಸಮಾಜ ಉಪಯೋಗಿ ಕಾರ್ಯಗಳಲ್ಲಿ ತನ್ನನ್ನು ತೊಡಗಿಸಿ ಕೊಂಡಿರುವುದು ಸಂತಸದ ಸಂಗತಿ. ಅದೇ ರೀತಿ ರಾಣಿಚನ್ನಮ್ಮ ವಿಶ್ವವಿದ್ಯಾಲಯ ಕೂಡಾ ಮುಂಬರುವ ದಿನಗಳಲ್ಲಿ ರಾಜ್ಯದ ನಂ.1 ವಿವಿಯಾಗಿ ಹೊರ ಹೊಮ್ಮಲಿದೆ.

ಮುಂದಿನ ಶೈಕ್ಷಣಿಕ ವರ್ಷದಲ್ಲಿ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಸೇರಿದಂತೆ ವಿವಿಧ ವಿಷಯಗಳ ಕುರಿತಾಗಿ ಹೊಸ ಹೊಸ ವಿಭಾಗಗಳನ್ನು ತೆರೆಯಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಪಂಡಿತ ದೀನದಯಾಳ ಉಪಾಧ್ಯಾಯರ ಕುರಿತಾಗಿ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯ ವಿಜೇತ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು. ಪಂಡಿತ ದೀನದಯಾಳ ಉಪಾಧ್ಯಾಯ ಅವರ ಕುರಿತಾದ ಸಂಶೋಧನಾ ಲೇಖನಗಳನ್ನು ಒಳಗೊಂಡ ಕೃತಿಗಳಾದ 'ಪಂಡಿತ ದೀನದಯಾಳ ಉಪಾಧ್ಯಾಯ ಅವರ ಚಿಂತನೆಗಳು' ಮತ್ತು ಪಂಡಿತ ದೀನದಯಾಳ ಉಪಾಧ್ಯಾಯರಿ ಫ್ಲೆಕ್ಷನ್ಸ್‌ಆಫ್ ನೇಷನ್ ಬಿಲ್ಡಿಂಗ್' ಎಂಬ ಎರಡು ಪುಸ್ತಕಗಳನ್ನು ಬಿಡುಗಡೆಗೊಳಿ ಸಲಾಯಿತು.

ಮೌಲ್ಯಮಾಪನ ಕುಲಸಚಿವ ಪ್ರೊ.ಶಿವಾನಂದ ಗೋರನಾಳೆ, ಹಣಕಾಸುಅಧಿಕಾರಿ ಪ್ರೊ.ಎಸ್.ಬಿ. ಆಕಾಶ, ಪ್ರೊ.ಎಚ್.ಬಿ. ಕಾಂಬ್ಳೆ, ಪ್ರೊ.ರಿಯಾಜ್ ಮನಗೂಳಿ, ಪ್ರೊ. ವಿಜಯ ನಾಗಣ್ಣವರ ಸೇರಿದಂತೆ ವಿವಿಧ ವಿಭಾಗಗಳ ಡೀನರು ಮತ್ತು ಮುಖ್ಯಸ್ಥರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಶೀತಲ ಅಕ್ಕೋಲೆ ಪ್ರಾರ್ಥಿಸಿದರು.ಪೀಠದ ಸಂಯೋಜಕ ಡಾ.ಕನಕಪ್ಪ ಪೂಜಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಸುಷ್ಮಾಆರ್ ವಂದಿಸಿದರು. ಪೀಠದ ಸಹಾಯಕ ಪ್ರಾಧ್ಯಾಪಕ ಡಾ.ಶಿವಲಿಂಗಯ್ಯ ಗೋಠೆ ನಿರೂಪಿಸಿದರು.

## ವಿವಿಧ ಅಭಿವೃದ್ಧಿ ಕಾಮಗರಿಗಳಿಗೆ ಭೂಮಿ ಪೂಜೆ



ಬೆಳಗಾವಿ : ಬೆಳಗಾವಿ ಉತ್ತರ ಮತಕ್ಷೇತ್ರದ ಅಭಿವೃದ್ಧಿಯ ಹರಿಕಾರರಾದ ಅನಿಲ ಬೆನಕೆರವರು ಮಹಾನಗರ ಪಾಲಿಕೆಯ ಅನುದಾನದಲ್ಲಿ ಉತ್ತರ ವಿಧಾನ ಸಭಾಕ್ಷೇತ್ರ ವ್ಯಾಪ್ತಿಯ ಭೋವಿ ಗಲ್ಲಿಯಲ್ಲಿ ಸಿಸಿ ರಸ್ತೆ ನಿರ್ಮಾಣ, ಕಣಬರ್ಗಿಯಲ್ಲಿ ನಾಲಾ ನಿರ್ಮಾಣ, ಬಸವಣ ಕುಡಚಿಯಲ್ಲಿ ನಾಯಕ ಸಮಾಜದ ಸ್ಮಶಾನ ಅಭಿವೃದ್ಧಿ ಕಾಮಗಾರಿ ಮತ್ತು ಅಲಾರವಾಡದಲ್ಲಿ ಚರಂಡಿ ನಿರ್ಮಾಣ ಹಾಗೂ ರುಕ್ಮೀಣಿ ನಗರದ ಕೊಂಚಿಕೊರವರಗಲ್ಲಿಯಲ್ಲಿ ಕೊಳವೆ ಬಾವಿ ಕೊರೆಯುವ ಕಾರ್ಯಕ್ಕೆ ಅವರ ಅಮೃತ ಹಸ್ತದಿಂದ ಪೂಜೆ ಸಲ್ಲಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾದ್ಯಮಗಳಿಗೆ ಮಾಹಿತಿ ನಿಡಿದ ಶಾಕಸರು ಮಹಾನಗರ ಪಾಲಿಕೆಯ ಅನುದಾನದಲ್ಲಿ ನಗರದ ಭೋವಿ ಗಲ್ಲಿಯಲ್ಲಿ 15 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ, ಕಣಬರ್ಗಿಯಲ್ಲಿ 70 ಲಕ್ಷ ವೆಚ್ಚದಲ್ಲಿ ನಾಲಾ ನಿರ್ಮಾಣ, ಬಸವಣಕುಡಚಿಯಲ್ಲಿ 20 ಲಕ್ಷ ವೆಚ್ಚದಲ್ಲಿ ನಾಯಕ ಸಮಾಜದ ಸ್ಮಶಾನ ಅಭಿವೃದ್ಧಿ ಪಡಿಸುವ ಕಾಮಗಾರಿ, ಅಲಾರವಾಡದಲ್ಲಿ 1 ಕೋಟಿ ರೂಪಾಯಿ ವೆಚ್ಚದಲ್ಲಿ ಚರಂಡಿ ನಿರ್ಮಾಣ ಕಾಮಗಾರಿ ಸೇರಿದಂತೆರುಕ್ಮೀಣಿ ನಗರದಲ್ಲಿ ಕೊಳವೆ ಬಾವಿ ಕೊರೆಯುವ ಕಾರ್ಯಕ್ಕೆ ಚಾಲನೆ ನಿಡಲಾಗಿದೆ ಎಂದ ಅವರು ಈ ತಿಂಗಳ ಅಂತ್ಯದಲ್ಲಿ ಈಗಾಗಲೇ ಈ ಹಿಮದೆಚಾಲನೆ ನೀಡಲಾಗಿರುವ ಹಲವಾರು ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡು ಸಾರ್ವಜನಿಕ ಉಪಯೋಗಕ್ಕೆ ಬರಲಿವೆ ಎಂದು ಮಾಹಿತಿ ನೀಡಿದರು. ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರೊಂದಿಗೆ ನಗರ ಸೇವಕರು, ಮಹಾನಗರ ಪಾಲಿಕೆಯ ಅಧಿಕಾರಿಗಳು, ಗುತ್ತಿಗೆದಾರರು ಹಾಗೂ ಮುಖಂಡರುಗಳು, ರಹವಾಸಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಬಳ್ಳಾರಿ: ಲಂಚ ಪಡೆಯುತ್ತಿದ್ದ ಮೂವರು ಪುರಾತತ್ವ ಇಲಾಖೆಯ ಅಧಿಕಾರಿಗಳನ್ನು ಬಂಧಿಸಿದ ಸಿಬಿಐ




ಬಳ್ಳಾರಿ : ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ (ಎಎಸ್‌ಐ) ಮೂವರು ಉದ್ಯೋಗಿಗಳನ್ನು ಕೇಂದ್ರೀಯ ತನಿಖಾ ದಳ (ಸಿಬಿಐ) ಗುರುವಾರ ಬಳ್ಳಾರಿಯಲ್ಲಿ ಬಂಧಿಸಿದೆ.

ಪ್ರಶಾಂತ್ ರೆಡ್ಡಿ, ಯೋಗೀಶ್, ಮೊಹಮದ್ ಗೌಸ್ ಬಂಧಿತ ಅಧಿಕಾರಿಗಳಾಗಿದ್ದಾರೆ. ಮನೆ ಕಟ್ಟಲು ಪುರಾತತ್ವ ಇಲಾಖೆಯಿಂದ ಎನ್‌ಓಸಿ ನೀಡಲು ಹಣ ಬೇಡಿಕೆ ಇಟ್ಟಿದ್ದರು. ಈ ದೂರಿನ ಅನ್ವಯ ಖಾಸಗಿ ಹೋಟೆಲ್ನಲ್ಲಿ ಲಂಚದ ಹಣವನ್ನು ಮುಂಗಡವಾಗಿ ಪಡೆಯುವಾಗ ದಾಳಿ ಮಾಡಿದ ಸಿಬಿಐ ಅಧಿಕಾರಿಗಳು ಮೂವರು ಅಧಿಕಾರಿಗಳನ್ನು ಬಲೆಗೆ ಕೆಡವಿದ್ದಾರೆ.

1.5 ಲಕ್ಷ ಪಾವತಿಸಿದ ನಂತರವೇ ಅವರಿಗೆ ನಿರಾಕ್ಷೇಪಣಾ ಪ್ರಮಾಣಪತ್ರ (ಎನ್‌ಒಸಿ) ನೀಡುವುದಾಗಿ ಎಎಸ್‌ಐ ಅಧಿಕಾರಿಗಳು ನಿವಾಸಿಗೆ ತಿಳಿಸಿದರು. ಹೀಗಾಗಿ ನಿವಾಸಿ ಸಿಬಿಐಗೆ ದೂರು ನೀಡಿದ್ದಾರೆ.

ಗುರುವಾರ ರಾಕೇಶ್ ಸಿಂಗ್ ನೇತೃತ್ವದಲ್ಲಿ ನವದೆಹಲಿಯಿಂದ 14 ಸದಸ್ಯರ ಸಿಬಿಐ ತಂಡವು ಎಎಸ್‌ಐ ಕಚೇರಿ ಮೇಲೆ ದಾಳಿ ನಡೆಸಿ ಮೂವರನ್ನು ಬಂಧಿಸಿದೆ. ನನ್ನಿಂದ ಹಣ ಪಡೆಯುತ್ತಿದ್ದಾಗ ಅಧಿಕಾರಿಗಳ ಮೇಲೆ ಸಿಬಿಐ ದಾಳಿ ನಡೆಸಿದೆ. ಭ್ರಷ್ಟ ಅಧಿಕಾರಿಗಳಿಂದ ಕಿರುಕುಳಕ್ಕೊಳಗಾದ ಹಲವು ಬಿಲ್ಡರ್‌ಗಳನ್ನು ರಕ್ಷಿಸಿದ್ದಕ್ಕಾಗಿ ಸಿಬಿಐ ತಂಡಕ್ಕೆ ನಾನು ಕೃತಜ್ಞನಾಗಿದ್ದೇನೆ. ಎಎಸ್‌ಐ ಕೇಂದ್ರೀಯ ಸಂಸ್ಥೆಯಾಗಿರುವುದರಿಂದ ಸಿಬಿಐಗೆ ದೂರು ನೀಡಲು ನಿರ್ಧರಿಸಿದ್ದಾಗಿ ನಿವಾಸಿ ತಿಳಿಸಿದ್ದಾರೆ.

ಲಂಚ ಪಡೆದ ಎಎಸ್‌ಐ ಅಧಿಕಾರಿಗಳನ್ನು ಬಂಧಿಸಿರುವುದು ಇದೇ ಮೊದಲು ಎಂದು ಸ್ಥಳೀಯ ಕಾರ್ಯಕರ್ತರು ತಿಳಿಸಿದರು. ಈಗಾಗಲೇ ಅನೇಕ ಸ್ಥಳೀಯರು ಮನೆ ನಿರ್ಮಾಣದ ಸಮಯದಲ್ಲಿ ಎಎಸ್‌ಐ ಅಧಿಕಾರಿಗಳೊಂದಿಗೆ ಸಮಸ್ಯೆಗಳನ್ನು ಹೊಂದಿದ್ದರು. ನಮ್ಮ ದೇಶದ ಪರಂಪರೆಯನ್ನು ರಕ್ಷಿಸುವ ಎಎಸ್‌ಐ ಭ್ರಷ್ಟಾಚಾರದಲ್ಲಿ ತೊಡಗಿರುವುದು ಆಘಾತಕಾರಿಯಾಗಿದೆ. ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕೆಂದು ನಾವು ವಿನಂತಿಸುತ್ತೇವೆ" ಎಂದು ಕಾರ್ಯಕರ್ತರೊಬ್ಬರು ಹೇಳಿದ್ದಾರೆ.

## ಅಂಗನವಾಡಿ ಕೇಂದ್ರಗಳಿಗೆ ಆಟೋಪಕರಣ ಸಾಮಗ್ರಿ ವಿತರಣೆ



ಬೆಳಗಾವಿ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಬಿವೃದ್ಧಿಯೋಜನೆ ಹಾಗೂ ಸ್ಮಾರ್ಟ ಸಿಟಿ ಯೋಜನೆಯಡಿ ಬೆಳಗಾವಿ ಉತ್ತರ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಯ 75 ಅಂಗನವಾಡಿ ಕೇಂದ್ರಗಳಿಗೆ ಆಟೋಪಕರಣಗಳ ವಿತರಣಾ ಾರ್ಯಕ್ರಮ ನಡೆಯಿತು.

ಬೆಳಗಾವಿ ನಗರದ ಬಾಲಭವನದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಆಟೋಪಕರಣಗಳನ್ನು ಸಾಂಕೇತಿಕವಾಗಿ ಶಾಸಕ ಅನಿಲ ಬೆನಕೆ ಅವರುವಿತರಿಸಿದರು. ವಿತರಣೆ ಸಂದರ್ಭದಲ್ಲಿ ಮಾತನಾಡಿದಅವರು 23 ಅಂಗನವಾಡಿ ಕೇಂದ್ರಗಳನ್ನು ಸ್ವತಃ ಅಭಿವೃದ್ಧಿ ಪಡಿಸಿದ್ದು, ಮಕ್ಕಳಿಗೆ ಈಗ ಆಟಿಗೆ ಸಾಮಗ್ರಿಗಳನ್ನು ನೀಡುತ್ತಿದ್ದೇವೆಎಂದರು. ಆಟಿಕೆ ಸಾಮಗ್ರಿಗಳು ಇದ್ದರೆ ಮಕ್ಕಳ ಕಲಿಕಾ ಆಸಕ್ತಿಯು ಹೆಚ್ಚಾಗುತ್ತದೆಎಂದಅವರು ನಗರದಲ್ಲಿಇನ್ನೂ ಅನೇಕ ಅಂಗನವಾಡಿ ಕೇಂದ್ರಗಳು ಬಾಡಿಗೆಕಟ್ಟಡದಲ್ಲಿ ನಡೆಯುತ್ತಿದ್ದು, ಅಂತಹಅಂಗನವಾಡಿ ಕೇಂದ್ರಗಳನ್ನು ಹಂತ ಹಂತವಾಗಿ ಸ್ವತಃ ಕಟ್ಟಡ ಮಾಡುವ ಪ್ರಯತ್ನ ಮಾಡುವುದಾಗಿ ತಿಳಿಸಿದರು. ಅಂಗನವಾಡಿ ಶಿಕ್ಷಕಿಯರ ಸಮಸ್ಯೆ ಬಗ್ಗೆ ಈಗಾಗಲೇ ಸರ್ಕಾರದ ಮಟ್ಟದಲ್ಲಿಚರ್ಚೆ ನಡೆಯುತ್ತಿದೆ, ಅಂಗನವಾಡಿ ಶಿಕ್ಷಕಿಯರಿಗೆ ಆರೋಗ್ಯಕಾರ್ಡ ನೀಡುವ ಬಗ್ಗೆಯೂ ಚಚೆ ನಡೆಯುತ್ತಿದೆಎಂದು ಹೇಳಿದರು. ಕೋರೋನಾ ಸಂದರ್ಭದಲ್ಲಿ ಯಾರೂಯಾರು ಸಹಾಯಕ್ಕೆ ಆಗಲಿಲ್ಲ ಆದರೆಅಂಗನವಾಡಿ ಶಿಕ್ಷಕಿಯರು ಮುಂದೆ ಬಂದು ಕೆಲಸ ಮಾಡಿದ್ದಾರೆ. ಇದೇರೀತಿ ನಿಮ್ಮ ಕೆಲಸ ನಿರಂತರವಾಗಿರ ಬೇಕುಎಂದು ತಿಳಿಸಿದ ಅವರು ಅಂಗನವಾಡಿ ಶಿಕ್ಷಕರ ಸಮಸ್ಯೆ ಬಗ್ಗೆ ಚರ್ಚೆ ನಡೆಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089